# ಕರಾವಳಿ ತರಂಗಿಣಿ

ಕಡಲ ಕಿನಾರೆಯಿಂದ ಕೆಂಪು ಕೋಟೆಯವರೆಗೆ..

ಕನ್ನಡ ವಾರಪತ್ರಿಕೆ

**ಸುಭಾಷಿತ:**

ನಿನ್ನನ್ನು ನೀನೆ ಮರೆತುಬಿಡು ಪರವಾಗಿಲ್ಲ
ಆದರೆ ಸತ್ಯ, ಧರ್ಮವನ್ನು ಮರೆಯಬೇಡ..
ಅಗತ್ಯತೆಗಾಗಿ ಅನ್ಯರ ಸಹವಾಸ ಮಾಡು
ಆದರೆ ದುಷ್ಟಜನರಿಗೆ ಬಲಿಯಾಗಬೇಡ..
ನೀನು ಮಣ್ಣಲ್ಲಿ ಮಣ್ಣಾಗು ಪರವಾಗಿಲ್ಲ
ಆದರೆ ಕೆಟ್ಟವರಲ್ಲಿ ನೀನು ಒಬ್ಬನಾಗಬೇಡ..
ಭಗವಂತನಲ್ಲಿ ನಿನಗೆ ನಂಬಿಕೆ ಇಲ್ಲದಿದ್ದರೂ
ಪರವಾಗಿಲ್ಲ, ಆದರೆ ನಂಬಿಕೆಯಲ್ಲಿಯೇ
ಭಗವಂತನಿರುವದನ್ನು ಅಲ್ಲಗಳೆಯಬೇಡ..
**ಭಗವಾನ್ ಶ್ರೀಕೃಷ್ಣ**



REGD NO: 1327299/KARKAN/2018/26532 www.karavalitharangini.com KARAVALI THARANGINI KANNADA Weekly Mangaluru ದಿನಾಂಕ: 06-09-2024 to 12-09-2024 ಬೆಲೆ: 7-00 ಸಂಪುಟ–4 ಸಂಚಿಕೆ–11 ಪುಟಗಳು–6









ಸಾಲು ಸಾಲು ಹಬ್ಬಗಳು ಬರುತ್ತಿದ್ದು ಜನ ಉತ್ಸಾಹದಿಂದ ಹಬ್ಬಗಳ ಆಚರಣೆಯಲ್ಲಿ ತೊಡಗಿದ್ದಾರೆ. ಇಂತಹ ಸಂದರ್ಭಗಳಲ್ಲಿ ಸಾರ್ವಜನಿಕ ಸ್ಥಳಗಳಲ್ಲಿ ನಡೆಯುವ ಉತ್ಸವಗಳಲ್ಲಿ ಗಂಡು ಹೆಣ್ಣೆನ್ನದೆ ಭಾಗವಹಿಸಿ ಖುಷಿ ಪಡುವುದು ಆಚರಣೆಗಳ ಸೌಂದರ್ಯ. ಇಂತಹ ಆಚರಣೆಗಳಲ್ಲಿ ಕೆಲವರು ಹುಚ್ಚಾಟಗಳನ್ನು ಪ್ರದರ್ಶಿಸಿ ಅಂತಹ ಆಚರಣೆಗಳಿಗೆ ಅವಮಾನ ಮಾಡುತ್ತಿರುವುದು ಕಂಡು ಬರುತ್ತಿದೆ. ಇಂತಹ ಹುಚ್ಚಾಟಗಳನ್ನು ಬಿಟ್ಟು ಹಬ್ಬ ಹರಿದಿನಗಳ ಮಹತ್ವವನ್ನು ಎಲ್ಲಡೆ ಪಸರಿಸುವಲ್ಲಿ ಯುವ ಪೀಳಿಗೆ ಗಮನಹರಿಸಬೇಕಾಗಿದೆ.

## ವಿಘ್ನವಿನಾಶಕನಿಗೆ ಸರಕಾರದಿಂದ ವಿಘ್ನ –ಕಾಮತ್



ಮಂಗಳೂರು: ರಾಜ್ಯ ಸರಕಾರ ವಿಘ್ನ ವಿನಾಶಕ ವಿನಾಯಕನಿಗೆ ವಿಘ್ನವನ್ನು ತಂದಿದೆ ಎಂದು ಮಂಗಳೂರು ದಕ್ಷಿಣ ಕ್ಷೇತ್ರದ ಶಾಸಕ ಡಿ. ವೇದವ್ಯಾಸ ಕಾಮತ್ ನಗರದ ಅಟಲ್ ಸೇವಾ ಕೇಂದ್ರದಲ್ಲಿ ನಡೆದ ಪತ್ರಿಕಾ ಗೋಷ್ಠಿಯಲ್ಲಿ ಆಕ್ರೋಶ ಹೊರಹಾಕಿದರು. ರಾಜ್ಯದಲ್ಲಿ ವಿಜೃಂಭಣೆಯಿಂದ ಗಣೇಶನ ಹಬ್ಬವನ್ನು ಆಚರಣೆ ಮಾಡಲಾಗುತ್ತಾ ಬಂದಿದೆ. ಆದರೆ ಈ ಬಾರಿ ಮಾತ್ರ ಹೊಸ ನಿಯಮಗಳನ್ನು ಸರಕಾರ ಜಾರಿಗೆ ತಂದಿದ್ದು, ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವ ಅತಿಥಿಗಳ ದಾಖಲೆ ನೀಡಬೇಕೆನ್ನುವುದು ಎಷ್ಟು ಸರಿ ಎಂದು ಪ್ರಶ್ನಿಸಿದರು. ಅಲ್ಲದೆ ಚಾಲಕನ ಲೈಸೆನ್ಸ್ ಸಹಿತ ಎಲ್ಲಾ ದಾಖಲೆ ಕೊಡಬೇಕು. **3ನೇ ಪುಟಕ್ಕೆ**

## ಜಿಲ್ಲೆಯಲ್ಲಿ ಪ್ರವಾಸೋಧ್ಯಮ ನಿಂತ ನೀರಾಗಿದೆ –ಭಂಡಾರಿ



ಮಂಗಳೂರು: ದ.ಕ. ಜಿಲ್ಲೆಯಲ್ಲಿ ಪ್ರವಾಸೋದ್ಯಮ ನಿಂತ ನೀರಾಗಿದ್ದು ಜಿಲ್ಲೆಗೆ ಹೊರಗಿನಿಂದ ಬರುವ ಪ್ರವಾಸಿಗರ ಸಂಖ್ಯೆ ತೀರಾ ಇಳಿಮುಖವಾಗಿದೆ. ಹೀಗಾಗಿ ಜಿಲ್ಲೆಯ ಅಭಿವೃದ್ಧಿಯ ದೃಷ್ಟಿಯಲ್ಲಿ ಪ್ರವಾಸೋದ್ಯಮಕ್ಕೆ ಹೆಚ್ಚಿನ ಒತ್ತು ನೀಡಲಾಗುವುದು ಮತ್ತು ಪಿಲಿಕುಳದಲ್ಲಿ ಉತ್ಸವವನ್ನು ಆಯೋಜಿಸುವ ಮೂಲಕ ಪಿಲಿಕುಳ ಪುನಶ್ಚೇತನಕ್ಕೆ ಕ್ರಮ ಕೈಗೊಳ್ಳಲಾಗುವುದು ಎಂದು ವಿಧಾನ ಪರಿಷತ್ ಶಾಸಕ ಡಾ.ಮಂಜುನಾಥ ಭಂಡಾರಿ ಹೇಳಿದ್ದಾರೆ. ದ.ಕ. ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ವತಿಯಿಂದ ನಗರದ ಪ್ರೆಸ್‌ಕ್ಲಬ್‌ನಲ್ಲಿ ಆಯೋಜಿಸಲಾದ ಸಂವಾದ ಕಾರ್ಯಕ್ರಮದಲ್ಲಿ ಮಾತಾಡಿದ ಅವರು, ಜಿಲ್ಲೆಯಲ್ಲಿ ಹಲವು ವರ್ಷಗಳಿಂದ ಸಾಮಾಜಿಕ ಚಟುವಟಿಕೆಗಳು ಸೀಮಿತಗೊಂಡಿದ್ದು, ದೇಶದ ಮಹಾನಗರಗಳಲ್ಲಿ ಇರುವಂತಹ ನೈಟ್ ಲೈಫ್ ಪರಿಕಲ್ಪನೆಯೇ ಇಲ್ಲವಾಗಿದೆ. ಹೀಗಾಗಿ ಇಲ್ಲಿ ಐಟಿ ಬಿಟಿ ಕಂಪನಿಗಳು ಹೂಡಿಕೆಗೆ ಹಿಂದೇಟು ಹಾಕುತ್ತಿವೆ. ಇಲ್ಲಿ ವಿದ್ಯಾರ್ಥಿಗಳು ಪರಸ್ಪರ ಮಾತನಾಡುವುದು, ತಿನ್ನುವ ಆಹಾರ, **3ನೇ ಪುಟಕ್ಕೆ...**

## ಸಂವಿಧಾನವೇ ಕಾಂಗ್ರೆಸಿನ ಸಿದ್ಧಾಂತ–ಸಸಿಕಾಂತ್ ಸೆಂಥಿಲ್



ಮಂಗಳೂರು: ಸಂವಿಧಾನವೇ ಕಾಂಗ್ರೆಸಿನ ಸಿದ್ಧಾಂತ ಎಂದು ಲೋಕಸಭಾ ಸದಸ್ಯ ಸಸಿಕಾಂತ್ ಸೆಂಥಿಲ್ ಹೇಳಿದರು. ಅವರು ಸಾಮರಸ್ಯ ಮಂಗಳೂರು, ನಗರದ ಓಷಿಯನ್ ಪರ್ಲ್‌ನಲ್ಲಿ ಆಯೋಜಿಸಲಾಗಿದ್ದ ಪ್ರಶಕ್ತ ವಿದ್ಯಾಮಾನಗಳು, ಪ್ರಜಾಪ್ರಭುತ್ವ, ಸಂವಿದಾನ, ಜಾತ್ಯಾತೀತೆಗೆ ಎದುರಾಗಿರುವ ಅಪಾಯಗಳ ಕುರಿತು ಸಂವಾದ ಕಾರ್ಯಕ್ರಮದಲ್ಲಿ ಮಾತನಾಡಿ, ಕಾಂಗ್ರೆಸ್ ಬೇರೆ ಪಕ್ಷಗಳಂತೆ ಅಲ್ಲ. ಕಾಂಗ್ರೆಸ್ ಒಂದು ಸಾಮೂಹಿಕ ಪಕ್ಷ. ಪಕ್ಷ ಎನ್ನುವುದು ಪಕ್ಷದ ಸಿದ್ಧಾಂತ, **3ನೇ ಪುಟಕ್ಕೆ...**






## ವಿಘ್ನ ವಿನಾಶಕನಿಗೆ ಸರಕಾರದಿಂದ ವಿಘ್ನ–ಕಾಮತ್

ಒಂದನೇ ಪುಟದಿಂದ......

ಆಯೋಜಕರ ಹೆಸರು ವಿಳಾಸ ಹಿಂದೆಯೂ ಪಡೆಯಲಾಗುತ್ತಿತ್ತು. ಆದರೆ ಈ ಬಾರಿ ಮಾತ್ರ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವ ಅತಿಥಿಗಳು, ಚಾಲಕನ ಲೈಸೆನ್ಸ್ ಸಹಿತ ಸಂಪೂರ್ಣ ದಾಖಲೆ ಕೊಡಬೇಕು, ಟ್ಯಾಬ್ಲೋ ಕುರಿತ ಮಾಹಿತಿ ನೀಡಬೇಕೆಂದು ಹೇಳಲಾಗಿದೆ. ಇದು ಹಿಂದೂಗಳ ಧಾರ್ಮಿಕ ಭಾವನೆಗೆ ರಾಜ್ಯ ಸರಕಾರ ಧಕ್ಕೆ ಉಂಟು ಮಾಡುವ ಕೆಲಸವಾಗಿದೆ. ಇದನ್ನು ನಾನು ಖಂಡಿಸುತ್ತೇನೆ ಎಂದರು.

## ಜಿಲ್ಲೆಯಲ್ಲಿ ಪ್ರವಾಸೋಧ್ಯಮ ನಿಂತ ನೀರಾಗಿದೆ–ಭಂಡಾರಿ

ಒಂದನೇ ಪುಟದಿಂದ......

ಧರಿಸುವ ಬಟ್ಟೆಯ ಮೇಲಿನ ನಿರ್ಬಂಧಗಳು, ಹೊರರಾಜ್ಯ, ದೇಶಗಳ ವಿದ್ಯಾರ್ಥಿಗಳು ಹಾಗೂ ಪೋಷಕರು ಕೂಡಾ ಇಲ್ಲಿ ಬರಲು ಹಿಂದೇಟು ಹಾಕುತ್ತಿದ್ದಾರೆ. ಶಿಕ್ಷಣ ಹಬ್ ಆಗಿರುವ ಜಿಲ್ಲೆಯಲ್ಲಿ ಹಿಂದೆಲ್ಲಾ ಹೊರ ರಾಜ್ಯಗಳ ಸಾಕಷ್ಟು ವಿದ್ಯಾರ್ಥಿಗಳು ಉನ್ನತ ಶಿಕ್ಷಣಕ್ಕಾಗಿ ಮಂಗಳೂರನ್ನು ಅವಲಂಬಿ ಸಿದ್ದರು. ಆದರೆ ಇತ್ತೀಚಿನ ವರ್ಷಗಳಲ್ಲಿ ಪಿಯುಸಿ ಮೇಲಿನ ಹಂತದ ಶಿಕ್ಷಣಕ್ಕೆ ಹೊರ ರಾಜ್ಯಗಳ ವಿದ್ಯಾರ್ಥಿಗಳ ಸಂಖ್ಯೆ ಕಡಿಮೆಯಾಗುತ್ತಿದೆ ಎಂದವರು ಹೇಳಿದರು. ವಿವಿಧ ಶಿಕ್ಷಣ ಸಂಸ್ಥೆಗಳಲ್ಲಿ ಲಕ್ಷಾಂತರ ಮಂದಿ ಶಿಕ್ಷಣ ಪಡೆಯುತ್ತಾರೆ. ಆದರೆ 9 ಗಂಟೆಯ ಬಳಿಕ ಐಸ್‌ಕ್ರೀಂ ಪಾರ್ಲರ್‌ಗಳು ಕೂಡಾ ಇಲ್ಲಿ ಬಾಗಿಲು ಮುಚ್ಚುತ್ತವೆ ಎಂದರು. ಮುಂದಿನ ದಿನಗಳಲ್ಲಿ ಜಿಲ್ಲೆಯ ಬೀಚ್ ಸೇರಿದಂತೆ ಪ್ರವಾಸೋದ್ಯಮಕ್ಕೆ ಪೂರಕವಾಗಿ ಕ್ರಮಗಳನ್ನು ಕೈಗೊಳ್ಳಲು ಕೂಡಾ ಆದ್ಯತೆ ನೀಡುವುದಾಗಿ ತಿಳಿಸಿದರು.

## ಸಂವಿಧಾನವೇ ಕಾಂಗ್ರೆಸಿನ ಸಿದ್ದಾಂತ– ಸಸಿಕಾಂತ್ ಸೆಂಥಿಲ್

ಒಂದನೇ ಪುಟದಿಂದ......

ಪಕ್ಷ ಸಂಘಟನೆ ಮತ್ತು ನಾಯಕತ್ವದಲ್ಲಿ ನಿಂತಿದೆ. ಹೊರಗೆ ಎಲ್ಲಾ ಒಂದೇ ಕುಟುಂಬದ ನಿರ್ಧಾರ ಅನ್ನಿಸುತ್ತದೆ ಆದರೆ ಹಾಗೆ ಇಲ್ಲ. ಎಲ್ಲವೂ ಚರ್ಚೆಗೆ ಒಳಪಟ್ಟು ತೆಗೆದುಕೊಂಡ ನಿರ್ಧಾರವೇ ರಾಹುಲ್‌ಗಾಂಧಿಯ ನಾಯಕತ್ವ ಸಂಘಟನೆಯಲ್ಲಿ ಕಾಂಗ್ರೆಸ್ ಸೋತಿದೆ. ಅದು ಒಪ್ಪಿಕೊಳ್ಳುವಂತಹುದು. ಕಾಂಗ್ರೆಸ್ ಸೇರಿದ ನಂತರ ಕಾಂಗ್ರೆಸ್‌ನಲ್ಲಿ ಹೆದರುವ ಸಂದರ್ಭ ಕಡಿಮೆಯಾಗಿದೆ. ರಾಮಮಂದಿರ ಬಂದರೆ ಎಲ್ಲಾ ಪ್ರತಿಪಕ್ಷಗಳು ಶಕ್ತಿ ಕಳೆದುಕೊಳ್ಳುತ್ತೇವೆ ಎಂಬ ಚಿತ್ರಣ ಇತ್ತು. ಆದರೆ ಅಯೋಧ್ಯೆಯಲ್ಲಿಯೇ ಅವರು ಸೋತು ಪ್ರತಿ ಪಕ್ಷಗಳ ಕೂಗು ಜನರಿಗೆ ಕೇಳುತ್ತಿದೆ ಎಂಬುದು ಸ್ಪಷ್ಟವಾಗಿದೆ. ಈಗ ಕಾಂಗ್ರೆಸ್ ಒಂದೇ ಪ್ರತಿ ಪಕ್ಷವಾಗದೆ ಇತರ ಎಲ್ಲಾ ಪ್ರಾದೇಶಿಕ ಪಕ್ಷಗಳು ಸೇರಿವೆ ಎಂದರು.

## ಮಹಿಳೆಯರು ಧ್ವನಿ ಎತ್ತಬೇಕು– ಸಿ ಮಂಜುಳಾ



ಮಂಗಳೂರು: ಮಹಿಳೆಯರು ಕೆಲಸ ಮಾಡುವ ಸ್ಥಳದಲ್ಲಿ ಲೈಂಗಿಕ ಕಿರುಕುಳ ತಡೆಗಟ್ಟಲು ಸಿನಿಮಾ ಉದ್ಯಮದಲ್ಲಿ ಮಾತ್ರವಲ್ಲ, ರಾಜಕೀಯ ಪಕ್ಷಗಳೂ ಆಂತರಿಕ ದೂರು ಸಮಿತಿ ರಚಿಸಬೇಕು ಎಂದು ಬಿಜೆಪಿ ಮಹಿಳಾ ಮೋರ್ಚಾ ರಾಜ್ಯ ಘಟಕದ ಅಧ್ಯಕ್ಷೆ ಸಿ. ಮಂಜುಳಾ ಅಭಿಪ್ರಾಯಪಟ್ಟರು. ಅವರು ನಗರದ ಬಿಜೆಪಿ ಕಚೇರಿಯಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, 'ರಾಜಕೀಯ ಪಕ್ಷಗಳು ಬೆಳೆದಂತೆ ಎಲ್ಲ ರೀತಿಯ ಜನರು ಬಂದು ಸೇರುತ್ತಾರೆ. ಪಕ್ಷದಲ್ಲಿ ದುಡಿಯುವ ಆಸೆಯಿಂದ ರಾಜಕಾರಣಕ್ಕೆ ಬರುವ ಮಹಿಳೆಯರು ಲೈಂಗಿಕ ಶೋಷಣೆಗೆ ಒಳಗಾದರೆ ಬಹಿರಂಗವಾಗಿ ಪ್ರತಿರೋಧಿಸಬೇಕು, ಇಲ್ಲವಾದಲ್ಲಿ ಪ್ರಗತಿಪರ ಚಿಂತನೆಯ ಮಹಿಳೆಯರು ತಮಗೆ ತಾವೇ ಅನ್ಯಾಯ ಮಾಡಿಕೊಂಡಂತೆ ಆಗುತ್ತದೆ. ಯಾವುದೇ ಪಕ್ಷ ಇರಲಿ, ಮಹಿಳೆಯರ ವಿಷಯ ಬಂದಾಗ ಅಲ್ಲಿ ಪಕ್ಷದ ಪ್ರಶ್ನೆ ಬರುವುದಿಲ್ಲ ಎಂದರು. ಮಹಿಳೆಯರಿಗೆ ಕಿರುಕುಳ ನೀಡುವ ವ್ಯಕ್ತಿಗಳು ಇದ್ದಲ್ಲಿ, ಅಂತಹವರನ್ನು ಪಕ್ಷದಿಂದ ಹೊರಹಾಕಬೇಕು. ನಮ್ಮ ಪಕ್ಷದಲ್ಲಿ ಅಂತಹ ಸಂದರ್ಭ ಬಂದಲ್ಲಿ ನಾನು ಖಂಡಿತವಾಗಿಯೂ ಪಕ್ಷಕ್ಕೆ ಶಿಫಾರಸು ಮಾಡುತ್ತೇನೆ ಎಂದರು.

## ಮಕ್ಕಳಿಂದ ಅರ್ಜಿ ಆಹ್ವಾನ

ಮಂಗಳೂರು – ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ 2024ನೇ ಸಾಲಿನ ಮಕ್ಕಳ ದಿನಾಚರಣೆ ಪ್ರಯುಕ್ತ ಬಾಲಕರಿಗಾಗಿ ಹೊಯ್ಸಳ ಮತ್ತು ಬಾಲಕಿಯರಿಗೆ ಕೆಳದಿ ಚೆನ್ನಮ್ಮ ಶೌರ್ಯ ಪ್ರಶಸ್ತಿಗೆ ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗೆ ಹಾಗೂ ಅರ್ಜಿ ನಮೂನೆಗಾಗಿ ಕಚೇರಿ ದೂರವಾಣಿ ಸಂಖ್ಯೆ 0824-2451254 ಸಂಪರ್ಕಿಸುವಂತೆ ಇಲಾಖೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಂಗನವಾಡಿ ಕಾರ್ಯಕರ್ತೆಯರ ನೇಮಕಾತಿ

ಮಂಗಳೂರು – ಜಿಲ್ಲೆಯ ವಿಟ್ಲ ಶಿಶು ಅಭಿವೃದ್ಧಿ ಯೋಜನೆಯ ಖಾಲಿಯಿರುವ ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರ ಹುದ್ದೆಗಳಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಸೆಪ್ಟೆಂಬರ್ 26 ಕೊನೆಯ ದಿನ. ಹೆಚ್ಚಿನ ಮಾಹಿತಿಗೆ 08255-238080 ಸಂಪರ್ಕಿಸುವಂತೆ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿದ್ಯಾರ್ಥಿ ವೇತನ:ಅರ್ಜಿ ಆಹ್ವಾನ

ಮಂಗಳೂರು – 2024-25ನೇ ಸಾಲಿಗೆ 1ರಿಂದ 8ನೇ ತರಗತಿ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತರ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್ಖ್ ಮತ್ತು ಪಾರ್ಸಿ ವಿದ್ಯಾರ್ಥಿಗಳಿಂದ ರಾಜ್ಯ ವಿದ್ಯಾರ್ಥಿ ವೇತನ ತಂತ್ರಾಂಶದಲ್ಲಿ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ವೇತನಕ್ಕೆ ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗೆ ಸಹಾಯವಾಣಿ ಸಂಖ್ಯೆ 8277799990 ಸಂಪರ್ಕಿಸುವಂತೆ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಂಗಳೂರು ವಿವಿ : ಪ್ರವೇಶಾತಿ ಅರ್ಜಿ ಆಹ್ವಾನ

ಮಂಗಳೂರು–2024-25ನೇ ಸಾಲಿನಲ್ಲಿ ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ನಡೆಸಲಾಗುವ ಸ್ನಾತಕೋತ್ತರ/ಡಿಪ್ಲೊಮಾ/ಸರ್ಟಿಫಿಕೇಟ್ ಕಾರ್ಯಕ್ರಮಗಳ ಪ್ರವೇಶಾತಿಗೆ ಆಫ್‌ಲೈನ್ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ನಮೂನೆ ಮತ್ತು ಹೆಚ್ಚಿನ ಮಾಹಿತಿಗೆ ಮಂಗಳೂರು ವಿಶ್ವವಿದ್ಯಾನಿಲಯದ ಜಾಲತಾಣ www. mangaloreuniversity.ac.in ಮೂಲಕ ಪಡೆಯುವಂತೆ ವಿಶ್ವವಿದ್ಯಾನಿಲಯದ ಕುಲಸಚಿವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶುಲ್ಕ ಮರುಪಾವತಿ ಯೋಜನೆಯಡಿ ಆನ್‌ಲೈನ್ ಅರ್ಜಿ ಆಹ್ವಾನ

ಶಿವಮೊಗ್ಗ:2024-25ನೇ ಸಾಲಿನಲ್ಲಿ ಪಿಯುಸಿ, ಡಿಪ್ಲೊಮಾ, ಐಟಿಐ, ಪದವಿ ಮತ್ತು ಸ್ನಾತ್ತಕೋತ್ತರ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಶುಲ್ಕ ಮರುಪಾವತಿ ಯೋಜನೆಯಡಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಧಿಕಾರಿಗಳ ಕಛೇರಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಶಿವಮೊಗ್ಗ. ದೂರವಾಣಿ, ಸಂಖ್ಯೆ 08182-220206ಗೆ ಸಂಪರ್ಕಿಸುವುದು ಎಂದು ಶಿವಮೊಗ್ಗ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿಗಳು ಪ್ರಕಟಣೆ ತಿಳಿಸಿದ್ದಾರೆ.

## ಹಬ್ಬಗಳು ಪೂರ್ಣಗೊಳ್ಳುವವರೆಗೆ ಡಿಜೆ ನಿಷೇಧ

ಶಿವಮೊಗ್ಗ : ಶಿವಮೊಗ್ಗ ನಗರ ಹಾಗೂ ಜಿಲ್ಲಾ ವ್ಯಾಪ್ತಿಯಲ್ಲಿ ಗಣೇಶ ಹಬ್ಬ ಹಾಗೂ ಈದ್ ಮಿಲಾದ್ ಆಚರಣೆ ಪ್ರಯುಕ್ತ ಮುಂಜಾಗ್ರತಾ ಕ್ರಮವಾಗಿ ಜಿಲ್ಲೆಯಲ್ಲಿ ಸಾರ್ವಜನಿಕ ಶಾಂತಿ ಮತ್ತು ಸುವ್ಯವಸ್ಥೆ ಕಾಪಾಡುವ ಹಿತದೃಷ್ಠಿಯಿಂದ ಸೆಪ್ಟೆಂಬರ್ 07 ರಿಂದ ಗಣೇಶೋತ್ಸವ ಪೂರ್ಣಗೊಳ್ಳುವವರೆಗೆ ಹಾಗೂ ಸೆಪ್ಟೆಂಬರ್ 16ರಿಂದ ಈದ್‌ಮಿಲಾದ್ ಹಬ್ಬ ಪೂರ್ಣಗೊಳ್ಳುವವರೆಗೂ ಶಿವಮೊಗ್ಗ ಜಿಲ್ಲೆಯಾದ್ಯಂತ ಡಿ.ಜೆ.ಸಿಸ್ಟಂ ಬಳಕೆಯನ್ನು ನಿಷೇಧಿಸಿ ಜಿಲ್ಲಾಧಿಕಾರಿಗುರು ದತ್ತ ಹೆಗಡೆಯವರು ಆದೇಶಿಸಿದ್ದಾರೆ.

## ವಿದ್ಯಾರ್ಥಿ ವೇತನಕ್ಕೆ ಅರ್ಜಿ ಆಹ್ವಾನ

ಮಡಿಕೇರಿ : ವಿರಾಜಪೇಟೆ ಮತ್ತು ಪೊನ್ನಂಪೇಟೆ ತಾಲ್ಲೂಕಿನ ವಿವಿಧ ಕಾಲೇಜುಗಳಲ್ಲಿ ಮೆಟ್ರಿಕ್ ನಂತರದ ತರಗತಿಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳು ವಿದ್ಯಾರ್ಥಿ ವೇತನ ಪಡೆಯಲು ಇಲಾಖೆಯ ಅಧಿಕೃತ ವೆಬ್‌ಸೈಟ್ ವಿಳಾಸ https://ssp.postmatric.karnataka. gov.in ರಲ್ಲಿ ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗೆ ದೂ.ಸಂ.9480843157, 9880232773 ಸಂಪರ್ಕಿಸಬಹುದು ಎಂದು ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

## ಕೃಷಿ ಡಿಪ್ಲೊಮಾ ಕೋರ್ಸ್ ಪ್ರವೇಶಕ್ಕೆ ಅರ್ಜಿ ಆಹ್ವಾನ

ಮಡಿಕೇರಿ : ಪ್ರಸಕ್ತ (2024-25) ಶೈಕ್ಷಣಿಕ ವರ್ಷದಲ್ಲಿ ಉಡುಪಿ ಜಿಲ್ಲೆಯ ಬ್ರಹ್ಮಾವರದ ಕೃಷಿ ಡಿಪ್ಲೊಮಾ ಕೋರ್ಸ್ ಪ್ರವೇಶಾತಿಗೆ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಸಲು ಸೆಪ್ಟೆಂಬರ್ 14 ರವರೆಗೆ ಕಾಲಾವಕಾಶ ಕಲ್ಪಿಸಲಾಗಿದೆ. ಅರ್ಜಿಯನ್ನು www.uahs.edu.in ವೆಬ್‌ಸೈಟ್‌ನಲ್ಲಿ ಎಲ್ಲಾ ಅಧಿಸೂಚನೆಗಳು ಶೀರ್ಷಿಕೆ ಅಡಿಯಲ್ಲಿ ಡೌನ್ಲೋಡ್ ಮಾಡಿ ಭರ್ತಿ ಮಾಡಿದ ಅರ್ಜಿಗಳನ್ನು ಸೆಪ್ಟೆಂಬರ್ 14 ರೊಳಗೆ ಸಲ್ಲಿಸಬಹುದಾಗಿದೆ.

## ಆಗಸ್ಟ್ ತಿಂಗಳಲ್ಲಿ ಮಳೆ ಕೊರತೆ !




ಉಡುಪಿ : ಜಿಲ್ಲೆಯಲ್ಲಿ ಜುಲೈ ತಿಂಗಳಲ್ಲಿ ಸುರಿದ ಶೇ.41ರಷ್ಟು ಅಧಿಕ ಮಳೆ ಜೂನ್ ಮತ್ತು ಆಗಸ್ಟ್ ತಿಂಗಳಲ್ಲಿ ಉಂಟಾಗಿರುವ ಮಳೆಯ ಕೊರತೆಯನ್ನು ತುಂಬಿಸುವ ಎಲ್ಲಾ ಸಾಧ್ಯತೆ ಕಂಡುಬರುತ್ತಿದೆ. ಹೀಗಾಗಿ ಈ ಬಾರಿ ಮಳೆಗಾಲದ ಮೂರು ತಿಂಗಳನ್ನು ಲೆಕ್ಕಕ್ಕೆ ತೆಗೆದುಕೊಂಡರೆ ಶೇ.7 ಹಾಗೂ ಇಡೀ ವರ್ಷದ ಮಳೆಯನ್ನು ತೆಗೆದುಕೊಂಡರೆ ಶೇ.10ರಷ್ಟು ಅಧಿಕ ಮಳೆ ಸುರಿದ ದಾಖಲೆ ಬರೆದಿದೆ. ಈ ಬಾರಿ ವಾಡಿಕೆ ಮಳೆಗಿಂತ ಅಧಿಕ ಮಳೆಯಾಗಲಿದೆ ಎಂದು ಕೇಂದ್ರ ಹವಾಮಾನ ಇಲಾಖೆ ನುಡಿದ ಭವಿಷ್ಯ ಈ ಬಾರಿ ನಿಜವಾಗುವ ಲಕ್ಷಣವಿದೆ. ಅದರ ಭವಿಷ್ಯ ಉಡುಪಿ ಜಿಲ್ಲೆಯ ಮಟ್ಟಿಗಂತೂ ಮಳೆಗಾಲದ ಮೂರನೇ ತಿಂಗಳ ಕೊನೆಗೆ ನಿಜವಾಗಿದೆ. ಉಡುಪಿ ಜಿಲ್ಲೆಯಲ್ಲಿ ಆಗಸ್ಟ್ ತಿಂಗಳಲ್ಲಿ ಶೇ.16ರಷ್ಟು ಮಳೆ ಕೊರತೆ ಕಾಣಿಸಿಕೊಂಡಿದೆ. ಆದರೆ ಜುಲೈ ತಿಂಗಳಲ್ಲಿ ಜಿಲ್ಲೆಯಲ್ಲಿ ವಾಡಿಕೆ ಮಳೆಗಿಂತ ಶೇ.41ರಷ್ಟು ಅಧಿಕ ಮಳೆ ಸುರಿದಿತ್ತು.

## ಹತ್ತು ಲಕ್ಷ ಆರ್‌ಟಿಸಿ, ಆಧಾರ್‌ಗೆ ಜೋಡಣೆ ಬಾಕಿ




ಉಡುಪಿ : ಜಮೀನಿನ ಪಹಣಿ (ಆರ್‌ಟಿಸಿ) ಯನ್ನು ಆಧಾರ್‌ಗೆ ಜೋಡಣೆ ಮಾಡುವುದನ್ನು ಸರಕಾರ ಕಡ್ಡಾಯ ಗೊಳಿಸಿದ್ದು, ಈ ಪ್ರಕ್ರಿಯೆ ಭರದಿಂದ ನಡೆಯುತ್ತಿದೆ. ಆ.29ರವರೆಗೆ ಜಿಲ್ಲೆಯಲ್ಲಿ ಶೇ.63.90ರಷ್ಟು ಪ್ರಗತಿ ಕಂಡುಬಂದಿದೆ ಎಂದು ಜಿಲ್ಲಾಧಿಕಾರಿ ಡಾ.ಕೆ.ವಿದ್ಯಾಕುಮಾರಿ ತಿಳಿಸಿದ್ದಾರೆ. ಜಿಲ್ಲೆಯಲ್ಲಿ ಒಟ್ಟು 28,16,692 ಆರ್‌ಟಿಸಿಗಳಿದ್ದು, ಇವುಗಳಲ್ಲಿ ಆ.29ರವರೆಗೆ 18,00,036 ಆರ್‌ಟಿಸಿಗಳನ್ನು ಆಧಾರ್‌ಗೆ ಲಿಂಕ್ ಮಾಡಲಾಗಿದೆ. ಇನ್ನೂ 10,16,856 ಆರ್‌ಟಿಸಿಗಳು ಆಧಾರ್‌ಗೆ ಸೀಡಿಂಗ್‌ಗೊಳ್ಳಲು ಬಾಕಿ ಇವೆ ಎಂದು ಹೇಳಿರುವ ಜಿಲ್ಲಾಧಿಕಾರಿಗಳು, ಬಾಕಿ ಉಳಿದಿರುವ ಭೂಮಾಲಕರ ಜಮೀನಿನ ಪಹಣಿಗಳನ್ನು ಆಧಾರ್‌ಗೆ ಜೋಡಣೆ ಮಾಡಲು ಒಂದು ವಾರದ ಕಾಲಾವಕಾಶವನ್ನು ನೀಡಿದ್ದಾರೆ ಎಂದು ತಿಳಿಸಿದ್ದಾರೆ. ಇತ್ತೀಚಿನ ದಿನಗಳಲ್ಲಿ ಹೆಚ್ಚುತ್ತಿರುವ ಸೈಬರ್ ಕ್ರೈಮ್ ಕಾರಣಗಳಿಂದ ಹೊರದೇಶದಲ್ಲಿರುವವರು ಓಟಿಪಿ ನೀಡಲು ಹಿಂದೇಟು ಹಾಕುತಿದ್ದಾರೆ. ಇದರಿಂದ ಆರ್‌ಟಿಸಿಗೆ ಆಧಾರ್ ಲಿಂಕ್ ಮಾಡುವಲ್ಲಿ ವಿಳಂಬವಾಗುತ್ತಿದೆ ಎಂದು ಜಿಲ್ಲಾಧಿಕಾರಿ ತಿಳಿಸಿದರು.

## ಆಶಾ ಕಾರ್ಯಕರ್ತೆಯರ ಸೇವೆಗೆ ಸರಕಾರ ಪ್ರತಿಫಲ ನೀಡಿಲ್ಲ



ಉಡುಪಿ : ರಾಜ್ಯದಲ್ಲಿ ಕಳೆದ 15 ವರ್ಷಗಳಿಂದ ಶಿಶು ಮರಣ, ತಾಯಿ ಮರಣ ಕಡಿಮೆಯಾಗಲು ಆರೋಗ್ಯ ಸೂಚಿ ಮಾಪಕಗಳು ಹೆಚ್ಚಿಸಲು ಆಶಾ ಕಾರ್ಯಕರ್ತೆಯರ ಸೇವೆ ಪ್ರಮುಖ. ಆದರೆ ಸರಕಾರ ಪ್ರತಿಫಲ ನೀಡದೆ ಹೀನಾಯವಾಗಿ ನಡೆಸಿಕೊಳ್ಳುತ್ತಿದೆ. ಇದಕ್ಕೆ ಸಂಘಟಿತ ನಿರಂತರ ಒಗ್ಗಟ್ಟಿನ ಹೋರಾಟ ಒಂದೇ ಪರಿಹಾರ ಆಗಿದೆ ಎಂದು ಕರ್ನಾಟಕ ರಾಜ್ಯ ಸಂಯುಕ್ತ ಆಶಾ ಕಾರ್ಯಕರ್ತೆಯರ ಸಂಘದ ರಾಜ್ಯ ಕಾರ್ಯದರ್ಶಿ ಡಿ.ನಾಗಲಕ್ಷ್ಮಿ ಹೇಳಿದ್ದಾರೆ. ಕರ್ನಾಟಕ ರಾಜ್ಯ ಸಂಯುಕ್ತ ಆಶಾ ಕಾರ್ಯಕರ್ತೆಯರ ಸಂಘ ಉಡುಪಿ ಜಿಲ್ಲಾ ಸಮಿತಿಯ ವತಿಯಿಂದ ಕಡಿಯಾಳಿ ಮಹಿಷ ಮರ್ದಿನಿ ಸಭಾಂಗಣದಲ್ಲಿ ಆಯೋಜಿಸಲಾದ ಉಡುಪಿ ಜಿಲ್ಲಾ ಮಟ್ಟದ ಸಮ್ಮೇಳನದಲ್ಲಿ ಭಾಗವಹಿಸಿ ಅವರು ಮಾತನಾಡುತಿದ್ದರು. ಆಶಾ ಕಾರ್ಯಕರ್ತೆಯರು ತಳಮಟ್ಟದಲ್ಲಿ ಆರೋಗ್ಯ ಸೇವೆಯನ್ನು ಮತ್ತು ಆರೋಗ್ಯದ ಅರಿವನ್ನು, ಸಾಮಾನ್ಯ ಜನಗಳಿಗೆ ನೀಡುತ್ತ ಅತ್ಯುತ್ತಮ ಸೇವೆ ಸಲ್ಲಿಸುತ್ತಿದ್ದಾರೆ. ಕರೋನಾ ಸಂದರ್ಭದಲ್ಲಿ ಇವರ ಸೇವೆಯನ್ನು ಮೆಚ್ಚಿ ವಿಶ್ವ ಆರೋಗ್ಯ ಸಂಸ್ಥೆ ಜಾಗತಿಕ ಆರೋಗ್ಯ ನಾಯಕರೆಂದು ಬಿರುದನ್ನು ನೀಡಿದೆ ಎಂದು ಅವರು ತಿಳಿಸಿದರು.

## ದ್ವೀಪಗಳಿಗೆ ಸಾರ್ವಜನಿಕರ ಪ್ರವೇಶ ನಿರ್ಬಂಧ !




ಉಡುಪಿ: ಬಾದರಗಢ ದ್ವೀಪ, ಮಿಡಲ್ ದ್ವೀಪ ಸೇರಿದಂತೆ ನಾಲ್ಕು ದ್ವೀಪಗಳಿಗೆ ಸಾರ್ವಜನಿಕರ ಪ್ರವೇಶ ನಿರ್ಬಂಧಿಸಿ ಉಡುಪಿ ಜಿಲ್ಲಾಧಿಕಾರಿ ಡಾ.ಕೆ.ವಿದ್ಯಾಕುಮಾರಿ ಆದೇಶ ಹೊರಡಿಸಿದ್ದಾರೆ. ಸಾರ್ವಜನಿಕರ ಸುರಕ್ಷತಾ ಹಿತದೃಷ್ಟಿಯಿಂದ ಹಾಗೂ ಕಾನೂನು ಸುವ್ಯವಸ್ಥೆಯನ್ನು ಕಾಪಾಡುವ ನಿಟ್ಟಿನಲ್ಲಿ ಅಕ್ರಮ ಚಟುವಟಿಕೆಗಳನ್ನು ನಿಯಂತ್ರಿಸುವುದು ಅಗತ್ಯವಾಗಿರುವುದರಿಂದ ಉಡುಪಿ ಆಸುಪಾಸಿನ ಕಡಲ ತೀರದಲ್ಲಿರುವ ಬಾದರಗಢ ದ್ವೀಪ, ಮಿಡಲ್ ದ್ವೀಪ (ಕೋಟೆ), ಮಾಲ್ತೀಗುಡ್ಡ ದ್ವೀಪ ಹಾಗೂ ಮಟ್ಟುಪಾರ್ ದ್ವೀಪ ಎಂಬ ನಾಲ್ಕು ದ್ವೀಪಗಳಿಗೆ ಯಾವುದೇ ಸಾರ್ವಜನಿಕರು ಪ್ರವೇಶಿಸದಂತೆ ಹಾಗೂ ಸೈಂಟ್ ಮೇರಿಸ್ ದ್ವೀಪಕ್ಕೆ ಸಂಜೆ 6ರಿಂದ ಬೆಳಗ್ಗೆ 6 ಗಂಟೆಯವರೆಗೆ ಸಾರ್ವಜನಿಕರು ಪ್ರವೇಶಿಸದಂತೆ ಹಾಗೂ ಯಾವುದೇ ಚಟುವಟಿಕೆಗಳನ್ನು ನಡೆಸದಂತೆ ನಿರ್ಬಂಧಿಸಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಡಾ.ಕೆ.ವಿದ್ಯಾಕುಮಾರಿಆದೇಶ ಹೊರಡಿಸಿದ್ದಾರೆ.

## ರೈತ ಬೆಳೆದ ಬೆಳೆಗೆ ರೈತನೆ ದರ ನಿಗದಿಪಡಿಸಲಿ : ಐತಾಳ್



ಕೋಟ : ದೇಶದಲ್ಲಿ ಕೃಷಿಗಾಗಿ ಸಾಕಷ್ಟು ಪ್ರತಿಭಟನೆಗಳು, ಉಪವಾಸ ಸತ್ಯಾಗ್ರಹಗಳು ನಡೆಯುತ್ತದೆ. ಆದರೆ ಇದು ಯಾವುದು ಕೂಡ ಸರಕಾರದ ಕದ ತಟ್ಟುತ್ತಿಲ್ಲ. ಇದಕ್ಕೆ ಪರ್ಯಾಯ ಮಾರ್ಗ ಎಂದರೆ ಈ ದೇಶದಲ್ಲಿ ರೈತನೆ ಅವನು ಬೆಳೆದ ಬೆಳೆಗೆ ದರ ನಿಗದಿಪಡಿಸುವಂತ್ತಾಗಬೇಕು ಎಂದು ಸಾಲಿಗ್ರಾಮ ಶ್ರೀಗುರುನರಸಿಂಹ ದೇಗುಲದ ಟ್ರಸ್ಟಿ ಕೆ.ಅನಂತಪದ್ಮನಾಭ ಐತಾಳ್ ಹೇಳಿದ್ದಾರೆ. ಕೋಟ ಪಂಚವರ್ಣ ಯುವಕ ಮಂಡಲ ಅಧೀನ ಸಂಸ್ಥೆ ಪಂಚವರ್ಣ ಮಹಿಳಾ ಮಂಡಲದ ನೇತೃತ್ವದಲ್ಲಿ ಗೀತಾನಂದ ಫೌಂಡೇಶನ್ ಮಣೂರು, ರೈತಧ್ವನಿ ಸಂಘ ಕೋಟ, ಗೆಳೆಯರ ಬಳಗ ಕಾರ್ಕಡ, ಎಸ್.ಸಿ.ಐ ಕೋಟ ಲಿಜನ್, ವಿಪ್ರ ಮಹಿಳಾ ಬಳಗ ಸಾಲಿಗ್ರಾಮ ಸಹಯೋಗದೊಂದಿಗೆ ರೈತರೆಡೆಗೆ ನಮ್ಮ ನಡಿಗೆ ಸಾಧಕ ರೈತರನ್ನು ಗುರುತಿಸುವ 38ನೇ ಸರಣಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡುತಿದ್ದರು.

## ಪ್ರಾಣಹಾನಿ ಉಂಟಾದಲ್ಲಿ ಯಾರು ಹೊಣೆ–ಕಾಮತ್



ಮಂಗಳೂರಿನ ಲೇಡಿಗೋಷನ್ ಆಸ್ಪತ್ರೆ ಬಳಿ ಅವೈಜ್ಞಾನಿಕವಾಗಿ ಬ್ಯಾರಿಕೇಡ್ ಅಳವಡಿಸಿದ್ದು ಇದರಲ್ಲಿ ಶಾಸಕರು, ಜನಪ್ರತಿನಿಧಿಗಳ ಬಳಿ ಚರ್ಚಿಸದೆ ಸಾರ್ವಜನಿಕರ ಗಮನಕ್ಕೆ ತರದೇ ನಿರ್ಧಾರ ಕೈಗೊಳ್ಳಲಾಗಿದೆ ಎಂದು ಮಂಗಳೂರು ದಕ್ಷಿಣ ಕ್ಷೇತ್ರದ ಶಾಸಕ ಡಿ. ವೇದವ್ಯಾಸ ಕಾಮತ್ ನಗರದ ಅಟಲ್ ಸೇವಾ ಕೇಂದ್ರದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ದೂರಿದರು. ಜನರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಇಂತಹ ಕ್ರಮ ಕೈಗೊಳ್ಳಬೇಕು. ಬ್ಯಾರಿಕೇಡ್ ದಾಟಿ ಹೋಗುವಾಗ ಜನರ ಪ್ರಾಣಹಾನಿ ಉಂಟಾದಲ್ಲಿ ಇದಕ್ಕೆ ಯಾರು ಹೊಣೆ?" ಎಂದು ವೇದವ್ಯಾಸ ಕಾಮತ್ ಪ್ರಶ್ನಿಸಿದರು. ಅಲ್ಲದೆ ಹಂಪನಕಟ್ಟೆ ವಿವಿ ಕಾಲೇಜ್ ಮುಂಭಾಗದಲ್ಲಿದ್ದ ಬಸ್ ನಿಲ್ದಾಣವನ್ನು ಏಕಾಏಕಿ ತೆರವುಗೊಳಿಸಲಾಗಿದೆ. ಇದರಿಂದ ಮಕ್ಕಳು ಮಹಿಳೆಯರು ಬಿಸಿಲು ಮಳೆಯಲ್ಲಿ ನಿಂತು ಬಸ್ ಕಾಯುವ ಪರಿಸ್ಥಿತಿ ನಿರ್ಮಾಣವಾಗಿದೆ. ಆಸ್ತಿ ತೆರಿಗೆಯಲ್ಲಿ ಗಣನೀಯ ಹೆಚ್ಚಳವಾಗಿದ್ದು ಸಾರ್ವಜನಿಕರು ತೊಂದರೆ ಅನುಭವಿಸುತ್ತಿದ್ದಾರೆ. ಬಂದರಿನಲ್ಲಿ ಲೀಸ್ ದರ ಜಾಸ್ತಿ ಮಾಡಿದ್ದು ಇದರಿಂದ ವ್ಯಾಪಾರಿಗಳು ಸಂಕಷ್ಟ ಎದುರಿಸುತ್ತಿದ್ದಾರೆ. ನಗರದಲ್ಲಿ ಟ್ರಾಫಿಕ್ ಜಾಮ್ ಸಾಮಾನ್ಯವಾಗಿದ್ದು ಟ್ರಾಫಿಕ್ ಸಮಸ್ಯೆ ಪರಿಹರಿಸಲು ಶೀಘ್ರವೇ ಕ್ರಮ ಕೈಗೊಳ್ಳಬೇಕು" ಎಂದು ಕಾಮತ್ ಒತ್ತಾಯಿಸಿದರು.

## ಮಂಗಳೂರು ಜಂಕ್ಷನ್–ಮುಂಬೈ ರೈಲು ಥಾಣೆವರೆಗೆ




ಉಡುಪಿ : ಮುಂಬೈಯ ಸಿಎಸ್‌ಎಂಟಿ ರೈಲ್ವೇ ನಿಲ್ದಾಣದಲ್ಲಿ ಫ್ಲಾಟ್‌ಫಾರಂ ನಂ.10,11,12,13ರ ವಿಸ್ತರಣಾ ಕಾಮಗಾರಿ ಸೆ.30ರವೆಗೆ ನಡೆಯಲಿರುವುದರಿಂದ ಹಲವು ದೂರ ಸಂಚಾರದ ರೈಲುಗಳ ಪ್ರಯಾಣ ವನ್ನು ಥಾಣೆ ಹಾಗೂ ದಾದರ್ ನಿಲ್ದಾಣಗಳಲ್ಲಿ ನಿಲ್ಲಿಸಲು ಕೇಂದ್ರ ರೈಲ್ವೆ ನಿರ್ಧರಿಸಿದೆ ಎಂದು ಕೊಂಕಣ ರೈಲ್ವೆ ಪ್ರಕಟಣೆ ತಿಳಿಸಿದೆ. ಅದರಂತೆ ರೈಲು ನಂ. 12134 ಮಂಗಳೂರು ಜಂಕ್ಷನ್–ಮುಂಬೈ ಸಿಎಸ್‌ಎಂಟಿ ಎಕ್ಸ್‌ಪ್ರೆಸ್ ರೈಲಿನ ಸಂಚಾರ ಸೆ.30ರವರೆಗೆ ಥಾಣೆ ನಿಲ್ದಾಣದಲ್ಲೇ ಕೊನೆಗೊಳ್ಳಲಿದೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

## ಅಂಬೇಡ್ಕರ್ ಸರ್ಕಲ್ ಹೆಸರಿಗೆ ಮಾತ್ರ ಎಂಬಂತಾಗಿದೆ




ಮಂಗಳೂರು : ನಗರದ ಜ್ಯೋತಿ ಸರ್ಕಲ್‌ನಲ್ಲಿ ಅಂಬೇಡ್ಕರ್ ಪ್ರತಿಮೆ ಪ್ರತಿಷ್ಠಾಪನೆ ಸಹಿತ ಸರ್ಕಲ್ ನಿರ್ಮಾಣ ಕಾಮಗಾರಿಯನ್ನು ಶೀಘ್ರವೇ ಆರಂಭಿಸಬೇಕು ಎಂದು ಪರಿಶಿಷ್ಟ ಜಾತಿ ಮತ್ತು ಬುಡಕಟ್ಟುಗಳ ಸಂಘ ಸಂಸ್ಥೆಗಳ ಒಕ್ಕೂಟದ ಪದಾಧಿಕಾರಿಗಳು ಪತ್ರಿಕಾಗೋಷ್ಠಿಯಲ್ಲಿ ಒತ್ತಾಯಿಸಿದರು. ಮೂಡ ಮಾಜಿ ಅಧ್ಯಕ್ಷ ತೇಜೋಮಯ ಮಾತನಾಡಿ, "ಮಂಗಳೂರಲ್ಲಿ ಸ್ಮಾರ್ಟ್ ಸಿಟಿ ಯೋಜನೆ ಏನು ಮಾಡಿದೆ ? ಮಹಾನ್ ಚೇತನ ಮಾನವತಾವಾದಿ ಬಿ.ಆರ್. ಅಂಬೇಡ್ಕರ್ ಸರ್ಕಲ್ ನಿರ್ಮಾಣಕ್ಕೆ ಇನ್ನೂ ಆಡಳಿತವರ್ಗ ಮನಸ್ಸು ಮಾಡಿಲ್ಲ. ಜ್ಯೋತಿ ಸರ್ಕಲ್ ನಲ್ಲಿ ಅಂಬೇಡ್ಕರ್ ಪ್ರತಿಮೆ ನಿರ್ಮಾಣಕ್ಕೆ ಈಗಾಗಲೇ ಮನವಿ ಮಾಡಿದ್ದರೂ ಯಾವುದೇ ಪ್ರಯೋಜನವಾಗಿಲ್ಲ ಎಂದರು. "ಸ್ಮಾರ್ಟ್ ಸಿಟಿ ಇಂಜಿನಿಯರ್ ಸರ್ಕಲ್‌ನಲ್ಲಿ ವಾಹನಗಳ ಓಡಾಟಕ್ಕೆ ಸಾಕಷ್ಟು ಸ್ಥಳ ಇಲ್ಲ ಹೀಗಾಗಿ ಪ್ರತಿಮೆ ನಿರ್ಮಿಸಲು ಸಾಧ್ಯವಾಗುತ್ತಿಲ್ಲ ಎನ್ನುತ್ತಾರೆ. ಆದರೆ ಈಗಿರುವ ಜಾಗದಲ್ಲೇ ಪ್ರತಿಮೆ ನಿರ್ಮಿಸಲು ನೀಲನಕ್ಷೆ ತಯಾರು ಮಾಡಿದಲ್ಲಿ ಯಾರಿಗೂ ಸಮಸ್ಯೆಯಾಗುವುದಿಲ್ಲ. ಗಾಂಧಿ, ನೆಹರು ಇನ್ನಿತರ ಮಹಾನುಭಾವರ ಪ್ರತಿಮೆ ನಿರ್ಮಿಸಲು ಇಲ್ಲಿ ಯಾವುದೇ ಸಮಸ್ಯೆಯಿಲ್ಲ. ಕೇವಲ ಅಂಬೇಡ್ಕರ್ ಪ್ರತಿಮೆ ವಿಚಾರದಲ್ಲಿ ಮಾತ್ರ ನಿರ್ಲಕ್ಷ್ಯ ಯಾಕೆ?" ಎಂದು ಪ್ರಶ್ನಿಸಿದರು.

## ಬೀದಿ ವ್ಯಾಪಾರಿಗಳನ್ನು ಅತಂತ್ರ ಗೊಳಿಸುವ ಹುನ್ನಾರ – ಸಿಐಟಿಯು




ಮಂಗಳೂರು : ಟೈಗರ್ ಕಾರ್ಯಾಚರಣೆ ನಡೆಸಿ ಬಡ ಬೀದಿ ವ್ಯಾಪಾರಿಗಳ ಬದುಕನ್ನೇ ನಾಶ ಮಾಡಿರುವ ಮಹಾನಗರ ಪಾಲಿಕೆ ಅವೈಜ್ಞಾನಿಕವಾಗಿ ವ್ಯಾಪಾರ ವಲಯಗಳನ್ನು ಗುರುತು ಮಾಡಿ ಬೀದಿ ವ್ಯಾಪಾರಿಗಳನ್ನು ಬಾಣಲೆಯಿಂದ ಬೆಂಕಿಗೆ ದೂಡಿದೆ ಎಂದು ದಕ್ಷಿಣಕನ್ನಡ ಬೀದಿಬದಿ ವ್ಯಾಪಾರಸ್ಥರ ಸಂಘ (ಸಿಐಟಿಯು) ಆರೋಪಿಸಿದೆ. ಪರ್ಯಾಯ ವ್ಯವಸ್ಥೆಗಳಿಲ್ಲದೇ, ಪೂರ್ವ ಯೋಜನೆಗಳಿಲ್ಲದೆ ಏಕಾಏಕಿ ಟೈಗರ್ ಕಾರ್ಯಾಚರಣೆ ನಡೆಸಿ ಕೈ ಸುಟ್ಟುಕೊಂಡಿರುವ ನಗರಪಾಲಿಕೆ ಬೀದಿ ಬದಿ ವ್ಯಾಪಾರಿಗಳ ಸಮಸ್ಯೆ ಪರಿಹರಿಸಲು ಹೆಣಗಾಡುತ್ತಿದೆ ಅದಕ್ಕಾಗಿ ಅವೈಜ್ಞಾನಿಕವಾಗಿ ವ್ಯಾಪಾರ ವಲಯ ಗುರುತು ಮಾಡಿ ಪ್ರಚಾರ ಪಡೆಯುತ್ತಿದೆ ಹೊರತು ಸಮಸ್ಯೆ ಬಗೆಹರಿಸುವ ಬಗ್ಗೆ ಕ್ರಮಗಳು ಜರಗುತ್ತಿಲ್ಲ, ವ್ಯಾಪಾರ ವಲಯ ಘೋಷಿಸುವಾಗ ರಾಜಕೀಯ ಹಸ್ತಕ್ಷೇಪ ಮಾಡಲಾಗಿದೆ ಆಡಳಿತ ಪಕ್ಷದ ಸದಸ್ಯರು ಒಬ್ಬರೇ ವ್ಯಾಪಾರ ಮಾಡುತ್ತಿದ್ದ ಜಾಗವನ್ನು ವ್ಯಾಪಾರ ವಲಯವಾಗಿ ಘೋಷಣೆ ಮಾಡಿದ್ದಾರೆ, ಜನರೇ ಹೋಗದ ಜಾಗವನ್ನು, ಪಾಲಿಕೆಗೆ ಸೇರದ ರೈಲ್ವೆ, ಹೆದ್ದಾರಿ ಇಲಾಖೆಯ ಜಾಗವನ್ನು, ಫುಟ್ಪಾತ್ ಜಾಗವನ್ನೂ ವ್ಯಾಪಾರ ವಲಯವಾಗಿ ಘೋಷಿಸಿರುವುದು ಹಾಸ್ಯಾಸ್ಪದ ಎಂದು ಸಿಐಟಿಯು ಸಂಯೋಜಿತ ಬೀದಿಬದಿ ವ್ಯಾಪಾರಸ್ಥರ ಸಂಘ ಟೀಕಿಸಿದೆ.

## ಮೇಯರ್ ಸರ್ವಾಧಿಕಾರಿಯಂತೆ ವರ್ತಿಸಿದ್ದಾರೆ–ಆಳ್ವಾ




ಮಂಗಳೂರು: ಸಾಮಾನ್ಯ ಸಭೆಯಲ್ಲಿ ಮೇಯರ್ ಅವರು ಸರ್ವಾಧಿಕಾರಿಯಂತೆ ವರ್ತಿಸಿದ್ದಾರೆ ಎಂದು ಮಹಾನಗರ ಪಾಲಿಕೆ ವಿಪಕ್ಷ ನಾಯಕ ಪ್ರವೀಣ್ ಚಂದ್ರ ಆಳ್ವಾ ಆರೋಪಿಸಿದರು. ನಗರದ ಕಾಂಗ್ರೆಸ್ ಭವನದಲ್ಲಿ ನಡೆದ ಪತ್ರಿಕಾಗೋಷ್ಟಿಯಲ್ಲಿ ಮಾತನಾಡಿದ ಅವರು, ಸಾಮಾನ್ಯ ಸಭೆಯಲ್ಲಿ ಚರ್ಚೆಗೆ ಪ್ರತಿಪಕ್ಷದವರಿಗೆ ಮೊದಲು ಅನುಮತಿ ನೀಡಬೇಕು. ಅದನ್ನು ಗಾಳಿಗೆ ತೂರಿ ಮೇಯರ್ ಅವರು ತಮ್ಮ ಕೊನೆಯ ಸಾಮಾನ್ಯ ಸಭೆಯಲ್ಲಿ ಶಿಷ್ಟಚಾರ ಮೀರಿರಿರುವುದು ಖಂಡನೀಯ. ಮನಪಾ ಇತಿಹಾಸದಲ್ಲಿ ಈ ರೀತಿ ನಡೆದದ್ದು ಇದೆ ಮೊದಲು. ಇವರ ಸಾಧನೆ ಶೂನ್ಯವಾಗಿರುವಾಗ ಅದನ್ನು ಮರೆಮಾಚಾಲು ಮೇಯರ್ ಈ ರೀತಿ ಮಾಡಿದ್ದಾರೆ. ಪ್ರತಿಪಕ್ಷವಾಗಿ ನಾವು ಅಭಿವೃದ್ಧಿ ವಿಚಾರದಲ್ಲಿ ನಾವು ಎಂದಿಗೂ ರಾಜಕೀಯ ಮಾಡಲಿಲ್ಲ. ಕಾಂಗ್ರೆಸ್ ಅಧಿಕಾರದಲ್ಲಿದ್ದಾಗ ಈ ರೀತಿ ಎಂದಿಗೂ ನಡೆದಿಲ್ಲ. ಈ ಮೇಯರ್ ಅವಧಿಯಲ್ಲಿ ಏನೂ ಅಭಿವೃದ್ಧಿ ಆಗಲಿಲ್ಲ. ಕಳೆದ 4 ವರ್ಷದಿಂದ ಅಧಿಕಾರದಲ್ಲಿರುವ ಇವರುಗಳು ಯಾವುದೇ ಪ್ರಯೋಜನಕಾರಿ ವ್ಯವಸ್ಥೆ ಸರಿ ಮಾಡಲಿಲ್ಲ ಎಂದರು.

## ಸಂವಿಧಾನದ ಬಗ್ಗೆ ಎಷ್ಟು ಗೌರವ ಇಟ್ಟುಕೊಂಡಿದೆ – ನಾಯಕ್



ಮಂಗಳೂರು: ಸಂವಿಧಾನದ ಬಗ್ಗೆ ಮಾತನಾಡುವ ಕಾಂಗ್ರೆಸ್ ಅದರ ಬಗ್ಗೆ ಎಷ್ಟು ಗೌರವ ಇಟ್ಟುಕೊಂಡಿದೆ ಎನ್ನುವುದು ಪ್ರಶ್ನೆಗೆ ಅರ್ಹ ಎಂದು ಶಾಸಕ ಪ್ರತಾಪಸಿಂಹ ನಾಯಕ್ ಹೇಳಿದರು. ಅವರು ನಗರದ ಬಿಜೆಪಿ ಕಚೇರಿಯಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ದಲಿತರನ್ನು ಗೌರವಿಸುವಲ್ಲಿ ಬಿಜೆಪಿ ತೋರಿದ ಗೌರವ ಕಾಂಗ್ರೆಸ್‌ನಲ್ಲಿ ಇಲ್ಲ. ತಮಗೆ ತೊಂದರೆಯಾದಾಗ ದಲಿತ ಹಿಂದುಳಿದ ವ್ಯಕ್ತಿ ಮೇಲೆ ಟಾರ್ಗೆಟ್ ಅನ್ನುವವರು ಬೇರೆ ಗೌರವಾನ್ವಿತ ಸ್ಥಾನದವರು ಮಾತ್ರ ಕೇಂದ್ರದ ಕೈಗೊಂಬೆ ಎನ್ನುತ್ತಾ ಹಿಂದುಳಿದ ಸಮಾಜದ ಅವರಿಗೆ ಅವಮಾನ ಮಾಡಿದೆ. ಅವಕಾಶ ಸಿಕ್ಕಾಗ ರಾಷ್ಟ್ರಪತಿಗಳು ರಾಜ್ಯಪಾಲರು ಎಲ್ಲರನ್ನು ಅವಮಾನಿಸಲಾಗಿದೆ. ಸಿದ್ದರಾಮಯ್ಯ ಮೇಲೆ ಆರೋಪ ಬಂದಾಗ ಶೋಕಾಸ್ ಕೊಟ್ಟಿರುವ ಬಗ್ಗೆ ಕಾಂಗ್ರೆಸ್ ಸರಕಾರದ ನಾಯಕರು ವಿಚಾರಣೆಗೆ ಕೊಟ್ಟಿರುವುದನ್ನು ಹೀಯಾಳಿಸಿ ಮಾತನಾಡುತ್ತಾರೆ. ಇವರಿಂದ ಮೂಡ ಹಗರಣದಲ್ಲಿ ಅನ್ಯಾಯಕ್ಕೊಳಾಗದವರು ಹಿಂದುಳಿದ ಮತ್ತು ಅಹಿಂದ ಸಮಾಜದವರು ಇವರಿಗೆ ಕಾಣುವುದಿಲ್ಲ ಅವರು ಬೇಷರತ್ತಾಗಿ ಕ್ಷಮೆ ಕೇಳಬೇಕು ಎಂದು ಅವರು ಅಗ್ರಹಿಸಿದರು.

## ಪಾಲಿಕೆ ಪರಿಷತ್ ಸಾಮಾನ್ಯ ಸಭೆ "ಕಲ್ಲುಮಯ"



ಮಂಗಳೂರು: ಮಂಗಳೂರು ಮಹಾನಗರ ಪಾಲಿಕೆಯ ಪರಿಷತ್ತು ಸಾಮಾನ್ಯ ಸಭೆ ಮಹಾನಗರ ಪಾಲಿಕೆಯ ಮಂಗಳ ಸಬಾಂಗಣದಲ್ಲಿ ಪೂವಾಹ್ನ 11.00 ಗಂಟೆಗೆ ಪ್ರಾರಂಭವಾಗುತ್ತಿದ್ದಂತೆ ಆಡಳಿತ ಪಕ್ಷದ ಸದಸ್ಯರು "ಕಾಂಗ್ರೆಸ್ ರಾಜ್ಯಪಾಲರ ವಿರುದ್ದದ ಪ್ರತಿಭಟನೆಯಲ್ಲಿ ಬಸ್ಸಿಗೆ ಕಲ್ಲು ಬಿಸಾಡಿದ ಸದಸ್ಯನನ್ನು ಹೊರಗೆ ಕಳುಹಿಸುವ ವಿಷಯವನ್ನು ತೆಗೆದುಕೊಳ್ಳುತ್ತಿದ್ದಂತೆ ವಿರೋದ ಪಕ್ಷದ ಸದಸ್ಯರು ವಿರೋದಿಸಲು ಪ್ರಾರಂಬಿಸಿದರು. ಆದರೆ ಆಡಳಿತ ಪಕ್ಷದ ಸದಸ್ಯರು ಪಟ್ಟು ಬಿಡದೆ ಬಸ್ಸಿಗೆ ಕಲ್ಲು ಬಿಸಾಡಿದ ವಿಷಯದ ಚರ್ಚೆ ಆಗಲೇ ಬೇಕೆಂದು ಹಠ ಹಿಡಿದರು. ಇದನ್ನು ವಿರೋದಿಸಿದ ಪ್ರತಿಪಕ್ಷದ ಸದಸ್ಯರು ಸದನದ ಬಾವಿಗೆ ಇಳಿದು ಪ್ರತಿಭಟಿಸಲು ಪ್ರಾರಂಬಿಸಿದಾಗ ಆಡಳಿತ ಪಕ್ಷದ ಮಹಿಳಾ ಸದಸ್ಯೆಯರು ಪಟ್ಟು ಬಿಡುವ ಹಾಗೇ ಕಾಣಿಸಲಿಲ್ಲ. ಕೊನೆಗೆ ಆಡಳಿತ ಪಕ್ಷದ ಸದಸ್ಯರು ಸಭೆಯನ್ನು ಬಹಿಷ್ಕರಿಸಿದ ಪ್ರಸಂಗದ ನಡುವೆ ವಿರೋದ ಪಕ್ಷದ ಸದಸ್ಯರು ಸದನದ ಅಂಗಳದಲ್ಲಿ ಪ್ರತಿಭಟನೆಗೆ ಕೂತರು. ಮೇಯರ್ ಮದ್ಯಂತರ ವಿರಾಮ ಘೋಷಿಸಿ ಮುನ್ನಡೆದರು. ಅಂತು ಪರಿಷತ್ ಸಾಮಾನ್ಯ ಸಭೆ ಕಲ್ಲುಮಯವಾಗಿತ್ತು.

## ಪಾಂಡೇಶ್ವರ ವೆಟ್‌ವೆಲ್‌ಗೆ ತ್ಯಾಜ್ಯ ನೀರು !




ಮಂಗಳೂರು: ಪಾಂಡೇಶ್ವರ ವೆಟ್‌ವೆಲ್‌ಗೆ ಅನಧಿಕೃತವಾಗಿ ತ್ಯಾಜ್ಯ ನೀರನ್ನು ಟ್ಯಾಂಕರ್ ಮೂಲಕ ಹರಿಸುತ್ತಿರುವ ವಿವಾದ ಹಿನ್ನೆಲೆಯಲ್ಲಿ ಮುನ್ನೆಚ್ಚರಿಕೆ ವಹಿಸಲು ಮುಂದಾಗಿರುವ ಮಂಗಳೂರು ಮಹಾನಗರ ಪಾಲಿಕೆಯು ಮೇಯರ್ ಸುಧೀರ್ ಶೆಟ್ಟಿ ಕಣ್ಣೂರು ಅವರ ನೇತೃತ್ವದಲ್ಲಿ ಮಂಗಳವಾರ ಪಾಲಿಕೆಯಲ್ಲಿ ತುರ್ತು ಸಭೆ ನಡೆಸಿ ಚರ್ಚಿಸಿತು. ಪಾಂಡೇಶ್ವರ, ಕುದ್ರೋಳಿ, ಜಪ್ಪು, ಬಂಗ್ರಕೂಳೂರು, ತಡಂಬೈಲ್ ವೆಟ್‌ವೆಲ್‌ಗಳ ಪೂರ್ಣ ಕಾರ್ಯಾಚರಣೆಯ ಮೂಲಕ ಎಲ್ಲಾ ಕಡೆ ಸಮಾನವಾಗಿ ಅಧಿಕೃತ ವಾಹನಗಳನ್ನು ಸೂಕ್ತ ನಿಗಾ ವಹಿಸಿ ನಿರ್ವಹಣೆ ಮಾಡಲು ಸಭೆಯಲ್ಲಿ ತೀರ್ಮಾನ ಕೈಗೊಳ್ಳಲಾಯಿತು. ಪಾಂಡೇಶ್ವರ ವೆಟ್‌ವೆಲ್ ವ್ಯಾಪ್ತಿಯ ಜನಸಾಮಾನ್ಯರ ಸಮಸ್ಯೆಗಳನ್ನು ಗಂಭೀರವಾಗಿ ಪರಿಗಣಿಸಿರುವ ಮಂಗಳೂರು ಪಾಲಿಕೆ ಪಾಂಡೇಶ್ವರ ವೆಟ್‌ವೆಲ್‌ನಲ್ಲಿದ್ದ ದಾಖಲೆಗಳ ಪ್ರಕಾರ 17 ವಾಹನಗಳು ಬಂದು ತ್ಯಾಜ್ಯ ನೀರು ಡಂಪ್ ಮಾಡಲು ಅನುಮತಿ ಇತ್ತು. ಆದರೆ, ಇದರ ಜತೆಗೆ 9 ಅನಧಿಕೃತ ವಾಹನಗಳಿಂದಲೂ ಒಳಚರಂಡಿ ನೀರನ್ನು ಪಾಂಡೇಶ್ವರ ವೆಟ್‌ವೆಲ್‌ಗೆ ತರಲಾಗುತ್ತಿದೆ ಎಂಬ ಅಂಶ ಬೆಳಕಿಗೆ ಬಂದಿದೆ.

# ಸುದ್ದಿ ತುಣುಕು

ಬಾಂಗ್ಲಾದೇಶವು ಮತ್ತೊಂದು ಅಫ್ಘಾನಿಸ್ಥಾನವಾಗುವತ್ತ ಸಾಗಿದ್ದು, ಇಸ್ಲಾಂ ಮೂಲಭೂತವಾದಿಗಳು ಬಾಂಗ್ಲಾ ಯುವಕರು ಭಾರತ ವಿರೋಧಿ, ಹಿಂದೂ ವಿರೋಧಿ ಮತ್ತು ಪಾಕಿಸ್ಥಾನ ಪರ' ಆಲೋಚನೆ ಹೊಂದುವಂತೆ ಮನಃಪರಿವರ್ತನೆ ಮಾಡುತ್ತಿದ್ದಾರೆ ಎಂದು ಲೇಖಕಿ ತಸ್ಲೀಮಾ ನಸ್ರೀನ್ ಆರೋಪಿಸಿದ್ದಾರೆ.

ತೆಲಂಗಾಣದ ಭದ್ರಾದ್ರಿ ಕೆಜತ್ತಗುಡಂ ಜಿಲ್ಲೆಯಲ್ಲಿ ಮಾವೋವಾದಿಗಳು ಮತ್ತು ಪೋಲೀಸರ ನಡುವೆ ನಡೆದ ಗುಂಡಿನ ಕಾಳಗದಲ್ಲಿ ಆರು ಮಂದಿ ಮಾವೋವಾದಿಗಳು ಹತರಾಗಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

ಲಿಂಗಾಯತ ಹಾಗೂ ಇಸ್ಲಾಂ ಧರ್ಮಗಳು ಬೇರೆ ಬೇರೆಯಾಗಿದ್ದರೂ ಎರಡೂ ಧರ್ಮಗಳ ನಡುವೆ ಕೆಲವು ವಿಚಾರಗಳಲ್ಲಿ ಸಮಾನ ಅಂಶಗಳಿವೆ ಎಂದು ಸಾಣೇಹಳ್ಳಿ ತರಳಬಾಳು ಶಾಖಾಮಠದ ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮೀಜಿ ಹೇಳಿದರು.

ನ್ಯಾಯಾಲಯದ ತೀರ್ಪು ಬಂದ ನಂತರ ಮುಖ್ಯಮಂತ್ರಿ ಸ್ಥಾನಕ್ಕೆ ಸಿದ್ದರಾಮಯ್ಯ ರಾಜೀನಾಮೆ ಕೊಡುವ ಪರಿಸ್ಥಿತಿ ಬರಲಿದೆ. ಅದಕ್ಕೂ ಮುನ್ನ ರಾಜೀನಾಮೆ ಕೊಟ್ಟು ಗೌರವಯುತವಾಗಿ ನಿರ್ಗಮಿಸಲಿ ಬಿ.ಎಸ್. ಯಡಿಯೂರಪ್ಪ ಸಲಹೆ ನೀಡಿದರು.

ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದ ಉಪ ಚುನಾವಣೆಯನ್ನು ಪಕ್ಷದ ಹೈಕಮಾಂಡ್ ಗಂಭೀರವಾಗಿ ಪರಿಗಣಿಸಿದ್ದು, ಯಾರೇ ನಿಂತರೂ ಗೆಲ್ಲಿಸಲು ಎಲ್ಲಾ ಮುಖಂಡರು ಪ್ರಯತ್ನಿಸುತ್ತೇವೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಕೆ.ಎನ್. ರಾಜಣ್ಣ ಹೇಳಿದರು.

ರೈತರ ಪಂಪ್‌ಸೆಟ್‌ಗಳಿಗೆ ಆಧಾರ್ ಕಾರ್ಡ್ ಜೋಡಣೆ ಮಾಡುವ ಮೂಲಕ ಖಾಸಗೀಕರಣಕ್ಕೆ ಹುನ್ನಾರ ನಡೆಸಿರುವ ಸರ್ಕಾರದ ನಡೆ ಖಂಡಿಸಿ ಕರ್ನಾಟಕ ರಾಜ್ಯ ರೈತ ಸಂಘ ಪ್ರತಿಭಟನಾ ರ್‍ಯಾಲಿ ನಡೆಸಿದೆ.

ನಟರಾಗಲಿ, ರಾಜಕಾರಣಿ ಅಗಲಿ, ಸಾಮಾನ್ಯ ಜನರೇ ಆಗಲಿ. ಇಂತಹ ಕೆಟ್ಟ ಕೆಲಸ ಮಾಡಬಾರದು. ಈ ವಿಷಯದಲ್ಲಿ ಯಾವುದೇ ಸಚಿವರು ಅವರ ಬೆನ್ನಿಗೆ ನಿಂತರೆ ಅವರು ಸಹ ಅಪರಾಧಿಗಳೇ ಎಂದು ಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಹೇಳಿದರು.

ದಶಕದ ಕಾಯುವಿಕೆ ಬಳಿಕ ಇದೀಗ ಎತ್ತಿನ ಹೊಳೆ ಯೋಜನೆಯ ಮೊದಲ ಹಂತದ ಕಾಮಗಾರಿ ಲೋಕಾರ್ಪಣೆಗೊಳ್ಳುತ್ತಿದೆ.

ಬಿಜೆಪಿ ಆಡಳಿತ ಅವಧಿಯಲ್ಲಿ ನಡೆದಿದೆ ಎನ್ನಲಾದ ಕೋವಿಡ್ ಹಗರಣದ ಕುರಿತು ಹೆಚ್ಚು ತಲೆಕೆಡಿಸಿಕೊಂಡಿರುವ ರಾಜ್ಯ ಸರ್ಕಾರ ಕೆಂಪಣ್ಣ ವರದಿಯ ಬಗ್ಗೆಯೂ ಕ್ಯಾಬಿನೆಟ್‌ನಲ್ಲಿ ಚರ್ಚೆ ಮಾಡಲಿ ಎಂದು ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಆಗ್ರಹಿಸಿದ್ದಾರೆ.

ಕನ್ನಡ ಚಲನಚಿತ್ರೋದ್ಯಮದಲ್ಲಿ ಮಹಿಳಾ ಕಲಾವಿದರು ಎದುರಿಸುತ್ತಿರುವ ಲೈಂಗಿಕ ಕಿರುಕುಳ ಸಮಸ್ಯೆಗಳನ್ನು ಅಧ್ಯಯನ ಮಾಡಿ ವರದಿ ಮಾಡಲು ನಿವೃತ್ತ ನ್ಯಾಯಾಧೀಶರ ನೇತೃತ್ವದಲ್ಲಿ ಸಮಿತಿ ರಚಿಸುವಂತೆ ಕೋರಿ ಫಿಲ್ಮ್ ಇಂಡಸ್ಟ್ರಿ ಫಾರ್ ರೈಟ್ಸ್ ಅಂಡ್ ಇಕ್ವಾಲಿಟಿ ಸಿಎಂ ಸಿದ್ದರಾಮಯ್ಯರನ್ನು ಭೇಟಿಯಾಗಿ ಮನವಿ ಪತ್ರ ಸಲ್ಲಿಸಿದೆ.

ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದಿಂದ ಈ ಬಾರಿ ನಟಿ ಹಾಗೂ ವಿಧಾನ ಪರಿಷತ್ ಸದಸ್ಯೆ ಉಮಾಶ್ರೀ ಸೇರಿದಂತೆ ಮೂವರಿಗೆ ಗೌರವ ಡಾಕ್ಟರೇಟ್ ಘೋಷಣೆ ಮಾಡಿದೆ.

# ಚಿಕನ್ ಸುಕ್ಕ



**ಬೇಕಾಗುವ ಸಾಮಾಗ್ರಿಗಳು :**

ಕೆಜಿ ಚಿಕನ್ – 1 ಕೆಜಿ
ಚಮಚ ದನಿಯಾ – 2 ಚಮಚ
ಮೆಂತೆ–1/2 ಚಮಚ, ಅರಿಶಿಣ ಪುಡಿ–ಚಿಟಿಕೆ
ಕರಿಮೆಣಸು – 1 ಚಮಚ
ಜೀರಿಗೆ – 1 ಚಮಚ,
ಗಸೆಗಸೆ – 1 ಚಮಚ
ಬೆಳ್ಳುಳ್ಳಿ – 5 ಎಸಳು
ಹುರಿದ ಬ್ಯಾಡಗಿ ಮೆಣಸಿನ ಕಾಯಿ – 10
ಕಾಯಿ ತುರಿ – ಒಂದು ಕಪ್
ಕರಿ ಬೇವಿನ ಎಲೆ – ಸ್ವಲ್ಪ
ಈರುಳ್ಳಿ – 2
ತುಪ್ಪ – 2 ಚಮಚ
ಉಪ್ಪು – ರುಚಿಗೆ ತಕ್ಕಷ್ಟು

**ಮಾಡುವ ವಿದಾನ :**

ಮೊದಲಿಗೆ ಬಾಣಲೆಯಲ್ಲಿ ತುಪ್ಪ ಹಾಕಿ ಬಿಸಿ ಮಾಡಿ ಅದರಲ್ಲಿ ಕರಿಮೆಣಸು, ಮೆಂತೆ, ಕೊತ್ತಂಬರಿ ಬೀಜ, ಗಸೆಗಸೆ, ಜೀರಿಗೆ, ಹಾಕಿ ಹುರಿದು ತಣ್ಣಗಾದ ನಂತರ ಮೆಣಸಿನ ಕಾಯಿ ಮತ್ತು ಅರಿಶಿಣ ಹಾಕಿ ಪುಡಿ ಮಾಡಬೇಕು. ನಂತರ ಈ ಪುಡಿಯನ್ನು ಚಿಕನ್ ಜೊತೆ ಮಿಶ್ರ ಮಾಡಿ ರುಚಿಗೆ ತಕ್ಕ ಉಪ್ಪು ಹಾಕಿ ಕಡಿಮೆ ಉರಿಯಲ್ಲಿ 4 ರಿಂದ 5 ನಿಮಿಷ ಬೇಯಿಸಿ ನಂತರ ತೆಂಗಿನ ಕಾಯಿ ತುರಿ ಹಾಕಿ, ಪಾತ್ರೆಯ ಬಾಯಿ ಮುಚ್ಚಿ ಮತ್ತೆ 4–5 ನಿಮಿಷ ಚಿಕನ್‌ನ್ನು ಬೇಯಿಸಬೇಕು. ಈಗ ಬಾಣಲೆಯನ್ನು ಬಿಸಿ ಮಾಡಿ ಅದಕ್ಕೆ ತುಪ್ಪ ಹಾಕಿ ಅದರಲ್ಲಿ ಕರಿಬೇವಿನ ಎಲೆ ಮತ್ತು ಕತ್ತರಿಸಿದ ಈರುಳ್ಳಿ ಹಾಕಿ, ಈರುಳ್ಳಿ ಕಂದು ಬಣ್ಣಕ್ಕೆ ಬರುವವರೆಗೆ ಹುರಿದು ಅದನ್ನು ತಯಾರಾದ ಚಿಕನ್ ಜೊತೆ ಹಾಕಿ ಮಿಶ್ರ ಮಾಡಿದರೆ ರುಚಿಕರವಾದ ಚಿಕನ್ ಸುಕ್ಕ ಸವಿಯಲು ಸಿದ್ಧ.

# ಸುಡಾನ್‌ನಲ್ಲಿ ಭೀಕರ ಆಹಾರ ಕ್ಷಾಮ



ಖಾರ್ಟೂಮ್: ಸುಡಾನ್‌ನಲ್ಲಿ ಈ ಹಿಂದೆ ಎಂದೂ ಕಾಣದಷ್ಟು ಭೀಕರ ಹಸಿವಿನ ಬರ ಎದುರಿಸುತ್ತಿದೆ ಎಂದು ಮೂರು ಅಂತಾರಾಷ್ಟ್ರೀಯ ನೆರವು ಸಂಸ್ಥೆಗಳು ಗಂಭೀರ ಎಚ್ಚರಿಕೆ ನೀಡಿವೆ. ಸುಡಾನ್ ಬಗ್ಗೆ ಅಂತಾರಾಷ್ಟ್ರೀಯ ಸಮುದಾಯದ ಸಂಪೂರ್ಣ ನಿರ್ಲಕ್ಷ್ಯದ ಮಧ್ಯೆ ಅಲ್ಲಿನ ಜನ ಹಸಿವಿನಿಂದ ಸಾಯುತ್ತಿದ್ದಾರೆ ಎಂದು ನಾರ್ವೇಜಿಯನ್ ನಿರಾಶ್ರಿತರ ಮಂಡಳಿ, ಡ್ಯಾನಿಶ್ ನಿರಾಶ್ರಿತರ ಮಂಡಳಿ ಮತ್ತು ಮರ್ಸಿಕಾರ್ಪ್ಸ್ ಜಂಟಿ ಹೇಳಿಕೆಯಲ್ಲಿ ತಿಳಿಸಿವೆ.

# ಉಕ್ರೇನ್ ಮೇಲೆ ರಷ್ಯಾ ಭೀಕರ ಕ್ಷಿಪಣಿ ದಾಳಿ



ಉಕ್ರೇನ್: ಉಕ್ರೇನ್‌ನ ಮಧ್ಯ–ಪೂರ್ವ ಪ್ರದೇಶದ ಪೋಲ್ಟವಾ ನಗರದ ಶೈಕ್ಷಣಿಕ ಸಂಸ್ಥೆ ಮತ್ತು ಸಮೀಪದ ಆಸ್ಪತ್ರೆಯ ಮೇಲೆ ರಷ್ಯಾ ಮಂಗಳವಾರ ನಡೆಸಿದ ಭಾರಿ ಕ್ಷಿಪಣಿ ದಾಳಿಯಲ್ಲಿ ಕನಿಷ್ಠ 51 ಜನರು ಮೃತಪಟ್ಟಿದ್ದು, 200ಕ್ಕೂ ಹೆಚ್ಚು ಜನರು ಗಾಯಗೊಂಡಿದ್ದಾರೆ. 2022ರಿಂದ ನಡೆಯುತ್ತಿರುವ ಯುದ್ಧದಲ್ಲಿ ರಷ್ಯಾ ನಡೆಸಿದ ಅತ್ಯಂತ ಭೀಕರ ದಾಳಿಗಳ ಪೈಕಿ ಇದು ಒಂದು ಎಂದು ಉಕ್ರೇನ್ ಅಧ್ಯಕ್ಷ ವೊಲೊಡಿಮಿರ್ ಝೆಲೆನ್‌ಸ್ಕಿ ತಿಳಿಸಿದ್ದಾರೆ.

# ಜೈಲಿನಿಂದ ತಪ್ಪಿಸಿಕೊಳ್ಳಲು ಯತ್ನಿಸಿದ ಕೈದಿಗಳ ಸಾವು



ಕಾಂಗೊ: ಕಾಂಗೊ ರಾಜಧಾನಿಯಲ್ಲಿರುವ ಕೇಂದ್ರ ಕಾರಾಗೃಹದಲ್ಲಿ ಭಾರೀ ದುರಂತ ಸಂಭವಿಸಿದೆ. ಕೈದಿಗಳು ತಪ್ಪಿಸಿಕೊಳ್ಳಲು ಯತ್ನಿಸುತ್ತಿರುವ ಕಾಲ್ತುಳಿತ ಮತ್ತು ಗುಂಡಿನ ದಾಳಿಗೆ 129 ಮಂದಿ ಮೃತಪಟ್ಟ ಘಟನೆ ಸೋಮವಾರ ನಸುಕಿನ ಜಾವದಲ್ಲಿ ನಡೆದಿದೆ. ನಿಗದಿತ ಸಂಖ್ಯೆಗಿಂತಲೂ ಅಧಿಕ ಕೈದಿಗಳು ಈ ಜೈಲಿನಲ್ಲಿದ್ದು, ತಪ್ಪಿಸಿಕೊಳ್ಳಲು ಯತ್ನಿಸಿದ್ದಾರೆ. ಜೈಲಿನ ಕಂಬಿಗಳನ್ನು ಮುರಿದು ನೂರಾರು ಜನರು ಪರಾರಿಯಾಗಲು ಪ್ರಯತ್ನಿಸಿದ್ದಾರೆ. ಇದರಿಂದ ಭಾರಿ ಕಾಲ್ತುಳಿತ ಉಂಟಾಗಿದೆ.

# ಉಗ್ರರನ್ನು ಬೇಟೆಯಾಡುತ್ತೇವೆ–ನೆತನ್ಯಾಹು



ಟೆಲ್ ಅವೀವ್: ಗಾಜಾ ಪಟ್ಟಿಯ ರಾಫಾ ಪ್ರದೇಶದ ಸುರಂಗವೊಂದರಲ್ಲಿ ಇಬ್ಬರು ಮಹಿಳೆಯರು ಸೇರಿದಂತೆ ಆರು ಒತ್ತೆಯಾಳುಗಳ ಶವಗಳನ್ನು ಇಸ್ರೇಲ್ ರಕ್ಷಣಾ ಪಡೆಗಳು ಪತ್ತೆ ಹಚ್ಚಿ ವಶಪಡಿಸಿಕೊಂಡಿವೆ. ಏತನ್ಮಧ್ಯೆ ಮೃತರ ಕುಟುಂಬಗಳಿಗೆ ಸಾಂತ್ವನ ಹೇಳಿರುವ ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು, ನಾವು ಉಗ್ರರನ್ನು ಬೇಟೆಯಾಡಿ ಹುಡುಕಿ ಕೊಲ್ಲಲಿದ್ದೇವೆ. ಅವರೊಂದಿಗೆ ಲೆಕ್ಕ ಚುಕ್ತಾ ಮಾಡಲಿದ್ದೇವೆ. ಹಮಾಸ್‌ನ ಕೃತ್ಯಗಳನ್ನು ನೋಡಿಕೊಂಡು ನಾವು ಸುಮ್ಮನಿರಲ್ಲ" ಎಂದು ಹೇಳಿದ್ದಾರೆ.

# ಬಾಂಗ್ಲಾದೇಶದಲ್ಲಿ ಅಲ್ಪಸಂಖ್ಯಾತ ಶಿಕ್ಷಕರ ರಾಜೀನಾಮೆ



ಢಾಕಾ: ಬಾಂಗ್ಲಾದೇಶದ ಪ್ರಧಾನಿ ಶೇಖ್ ಹಸೀನಾ ಅವರು ರಾಜೀನಾಮೆ ನೀಡಿದ ಕೆಲವೇ ವಾರಗಳಲ್ಲಿ ಅಲ್ಪಸಂಖ್ಯಾತ ಸಮುದಾಯಗಳ ಕನಿಷ್ಠ 49 ಶಿಕ್ಷಕರು ತಮ್ಮ ಹುದ್ದೆಗಳಿಗೆ ರಾಜೀನಾಮೆ ನೀಡಿದ್ದಾರೆ ಎಂದು ಸ್ಥಳೀಯ ಮಾಧ್ಯಮ ವರದಿಗಳು ತಿಳಿಸಿವೆ. ಬಲವಂತದಿಂದ ಇವರು ರಾಜೀನಾಮೆ ಕೊಡುವಂತೆ ಮಾಡಲಾಗಿದೆ ಎಂದು ವರದಿಗಳು ಹೇಳಿವೆ. ದೇಶಾದ್ಯಂತ ಅಲ್ಪಸಂಖ್ಯಾತ ಶಿಕ್ಷಕರ ಮೇಲೆ ದೈಹಿಕ ಹಲ್ಲೆಗಳು ನಡೆದಿವೆ. ಆಗಸ್ಟ್ 30ರ ಹೊತ್ತಿಗೆ ಕನಿಷ್ಠ 49 ಶಿಕ್ಷಕರಿಂದ ಬಲವಂತದಿಂದ ರಾಜೀನಾಮೆ ಕೊಡಿಸಲಾಗಿದೆ.

# ಟ್ರಂಪ್ ವಿವಾದಾತ್ಮಕ ಚಿತ್ರ 'ದಿ ಅಪ್ರೆಂಟಿಸ್' ತೆರೆಗೆ



ಅಮೆರಿಕ: ಅಮೆರಿದ ಅಧ್ಯಕ್ಷೀಯ ಚುನಾವಣೆ ಕಾವಿನ ನಡುವೆಯೇ ಡೋನಾಲ್ಡ್ ಟ್ರಂಪ್ ಅವರ ವಿವಾದಾತ್ಮಕ ಚಿತ್ರ ತೆರೆಗೆ ಬರಲು ಸಜ್ಜಾಗಿದೆ. ಚುನಾವಣೆಗೆ ಮುನ್ನವೇ ಬಿಡುಗಡೆಯಾಗಲಿರುವ ಚಿತ್ರದಲ್ಲಿ, ಅಮೆರಿಕ ಮಾಜಿ ಅಧ್ಯಕ್ಷ ತಮ್ಮ ಪತ್ನಿ ಮೇಲೆ ಎಸಗಿದ ಅತ್ಯಾಚಾರ ಸೇರಿದಂತೆ ಅನೇಕ ಆಘಾತಕಾರಿ ಅಂಶಗಳನ್ನು ಒಳಗೊಂಡಿದೆ. ಟ್ರಂಪ್ ಯೌವನ ಕಾಲದ ಕೆಲವು ಕೆಲವು ಸ್ಫೋಟಕ ಮಾಹಿತಿಯನ್ನು ಚಿತ್ರ ಹೊಂದಿದ್ದು, ಮೇಯಲ್ಲಿ ಕೇನ್ಸ್ ಫಿಲ್ಮ್ ಫೆಸ್ಟಿವಲ್‌ನಲ್ಲಿ ಪ್ರದರ್ಶಿತವಾದ ಚಿತ್ರ ನೋಡಿದ ಮಂದಿ ಆಘಾತ ವ್ಯಕ್ತಪಡಿಸಿದ್ದರು.

# ಪ್ಯಾರಾಲಿಂಪಿಕ್‌ನಲ್ಲಿ ಇತಿಹಾಸ ಬರೆದ ಭಾರತ



| | ಕರಾವಳಿ ತರಂಗಿಣಿ | ① | ② | ③ | |
|---|---|---|---|---|---|
| 15 | ಸ್ವಿಟ್ಜರ್ಲ್ಯಾಂಡ್ | 6 | 5 | 5 | 16 |
| 16 | ಭಾರತ | 5 | 9 | 11 | 25 |
| 17 | ದಕ್ಷಿಣ ಕೊರಿಯಾ | 5 | 8 | 13 | 26 |

ಫ್ರಾನ್ಸ್: ಪ್ಯಾರಾಲಿಂಪಿಕ್ ಕ್ರೀಡಾಕೂಟದಲ್ಲಿ ಭಾರತೀಯರ ಪದಕ ಬೇಟೆ ಭರ್ಜರಿಯಾಗಿ ಮುಂದುವರಿದಿದೆ. ಕೂಟದ ಐದನೇ ದಿನ 5 ಪದಕ ಬಾಚಿಕೊಳ್ಳುವ ಮೂಲಕ ಅತ್ಯುನ್ನತ ಸಾಧನೆ ಮಾಡಿತು. ಸದ್ಯ ಭಾರತದ ಖಾತೆಯಲ್ಲಿ 25 ಪದಕಗಳಿವೆ. ಈ ಮೂಲಕ ಪ್ಯಾರಾಲಿಂಪಿಕ್ ಇತಿಹಾಸದಲ್ಲೇ ಅತಿ ಹೆಚ್ಚು ಪದಕ ಗೆದ್ದ ಸಾಧನೆ ಮಾಡಿದೆ. ಈ ಹಿಂದಿನ ಟೋಕಿಯೋದಲ್ಲಿ 19 ಪದಕ ಗೆದ್ದಿತ್ತು. ಸದ್ಯ 5 ಚಿನ್ನ, 9 ಬೆಳ್ಳಿ ಮತ್ತು 11 ಕಂಚಿನ ಪದಕಗಳೊಂದಿಗೆ ಪದಕ ಪಟ್ಟಿಯಲ್ಲಿ 16 ನೇ ಸ್ಥಾನದಲ್ಲಿದೆ.

# ವಿಶ್ವ ಟೆಸ್ಟ್ ಚಾಂಪಿಯನ್‌ಶಿಪ್ ಫೈನಲ್‌ಗೆ ಮೂಹೂರ್ತ



ಹೈದರಾಬಾದ್: 2023–25ರ ವಿಶ್ವ ಟೆಸ್ಟ್ ಚಾಂಪಿಯನ್‌ಶಿಪ್‌ನ ಫೈನಲ್ ಪಂದ್ಯದ ದಿನಾಂಕವನ್ನು ಅಂತಾರಾಷ್ಟ್ರೀಯ ಕ್ರಿಕೆಟ್ ಮಂಡಳಿ (ಐಸಿಸಿ) ಪ್ರಕಟಿಸಿದೆ. ಮೂರನೇ ಆವೃತ್ತಿಯ ಫೈನಲ್ ಪಂದ್ಯ ಮುಂದಿನ ವರ್ಷ ಜೂನ್ 11 ರಿಂದ 15ರ ವರೆಗೆ ನಡೆಯಲಿದೆ. ಈ ಮಹತ್ವದ ಪಂದ್ಯಕ್ಕೆ ಕ್ರಿಕೆಟ್ ಕಾಶಿ ಎಂದೇ ಪ್ರಸಿದ್ಧಿ ಪಡೆದಿರುವ ಲಾರ್ಡ್ಸ್ ಮೈದಾನ ಆತಿಥ್ಯ ವಹಿಸಲಿದೆ. ಅಲ್ಲದೇ ಈ ಹೈವೋಲ್ಟೇಜ್ ಪಂದ್ಯಕ್ಕಾಗಿ ಮೀಸಲು ದಿನವನ್ನು ಸಹ ಇರಿಸಲಾಗಿದೆ.

# ಜಾವೆಲಿನ್ ಥ್ರೋನಲ್ಲಿ ಚಿನ್ನ ಗೆದ್ದ ಸುಮಿತ್




ಫ್ರಾನ್ಸ್: ಪ್ಯಾರಿಸ್ ಪ್ಯಾರಾಲಿಂಪಿಕ್ಸ್‌ನಲ್ಲಿ ಭಾರತ ಪದಕ ಸಾಧನೆ ಮಾಡಿದೆ. ಜಾವೆಲಿನ್ ಎಸೆತ ಸ್ಪರ್ಧೆಯಲ್ಲಿ ಸುಮಿತ್ ಆಂಟಿಲ್ ಚಿನ್ನದ ಪದಕ ಗೆದ್ದರು. ಪುರುಷರ ಈ64 ಜಾವೆಲಿನ್ ಥ್ರೋ ಸ್ಪರ್ಧೆಯಲ್ಲಿ 70.59 ಮೀಟರ್ ದೂರ ಜಾವೆಲಿನ್ ಎಸೆದ ಸುಮಿತ್ ಪ್ಯಾರಾಲಿಂಪಿಕ್ಸ್‌ನಲ್ಲಿ ತಮ್ಮದೇ ಆದ ಹಳೆಯ ದಾಖಲೆ ಮುರಿದರು. ಇದಕ್ಕೂ ಮುನ್ನ ಟೋಕಿಯೊ ಪ್ಯಾರಾಲಿಂಪಿಕ್ಸ್‌ನಲ್ಲೂ 68.55 ಮೀಟರ್ ದೂರ ಜಾವೆಲಿನ್ ಎಸೆದ ದಾಖಲೆ ಸುಮಿತ್ ಹೆಸರಲ್ಲಿತ್ತು.

# ವಿಮಾನ ನಿಲ್ದಾಣದ ಪರವಾನಗಿ ಮುಕ್ತಾಯ



ಶಿವಮೊಗ್ಗ: ಮಧ್ಯ ಕರ್ನಾಟಕದ ಏಕೈಕ ಮತ್ತು ಕಳೆದ ಫೆಬ್ರವರಿಯಲ್ಲಷ್ಟೇ ಉದ್ಘಾಟನೆಯಾಗಿದ್ದ ಶಿವಮೊಗ್ಗದ ಸೋಗಾನೆಯಲ್ಲಿರುವ ವಿಮಾನ ನಿಲ್ದಾಣ ಈ ತಿಂಗಳಾಂತ್ಯಕ್ಕೆ ಮುಚ್ಚುವ ಭೀತಿ ಎದುರಾಗಿದೆ. ನಿಲ್ದಾಣಕ್ಕೆ ಮೂಲಸೌಕರ್ಯ, ಭದ್ರತಾ ವ್ಯವಸ್ಥೆ ಉತ್ತಮವಾಗಿಲ್ಲದ ಕಾರಣ ವಿಮಾನಗಳ ಹಾರಾಟಕ್ಕೆ ನಾಗರಿಕ ವಿಮಾನಯಾನ ಮಹಾ ನಿರ್ದೇಶನಾಲಯ (ಡಿಜಿಸಿಎ) ನೀಡಿದ್ದ ಪರವಾನಗಿ ವಾಪಸ್ ಪಡೆಯುವ ಸಾಧ್ಯತೆ ಇದೆ. ಈ ನಿಲ್ದಾಣದಿಂದ ವಿಮಾನಗಳ ಹಾರಾಟಕ್ಕೆ ಡಿಜಿಸಿಎ ನೀಡಿರುವ ಪರವಾನಗಿಯು ಸೆ. 23ಕ್ಕೆ ಮುಕ್ತಾಯಗೊಳ್ಳಲಿದೆ.

# ಉತ್ತಮ ಶಿಕ್ಷಕರ ಪ್ರಶಸ್ತಿ ಪಟ್ಟಿ ಪ್ರಕಟ: ಪ್ರಶಸ್ತಿ ಪ್ರದಾನ




ಬೆಂಗಳೂರು: ರಾಜ್ಯ ಮಟ್ಟದ ಉತ್ತಮ ಶಿಕ್ಷಕರ ಪ್ರಶಸ್ತಿ ಪಟ್ಟಿಯನ್ನು ಶಿಕ್ಷಣ ಇಲಾಖೆ ಪ್ರಕಟಿಸಿದೆ. ಪ್ರಾಥಮಿಕ ಶಾಲೆಯ ವಿಭಾಗದಲ್ಲಿ 20 ಶಿಕ್ಷಕರು ಹಾಗೂ ಪ್ರೌಢ ಶಾಲಾ ವಿಭಾಗದಲ್ಲಿ 11 ಶಿಕ್ಷಕರನ್ನು ಪ್ರಶಸ್ತಿಗೆ ಆಯ್ಕೆ ಮಾಡಲಾಗಿದ್ದು, ಶಿಕ್ಷಕರ ದಿನಾಚರಣೆಯಂದು ಸರ್ಕಾರ ಪ್ರಶಸ್ತಿ ಪ್ರದಾನ ಮಾಡಲಿದೆ. ಉತ್ತಮ ಶಿಕ್ಷಕರ ಪ್ರಶಸ್ತಿ ಜೊತೆಗೆ ರಾಜ್ಯಮಟ್ಟದ ಪ್ರಶಸ್ತಿಗೆ ಆಯ್ಕೆಯಾದ ಮಹಿಳಾ ಶಿಕ್ಷಕಿಯರಿಗೆ ಸಾವಿತ್ರಿಬಾಯಿ ಪುಲೆ ಪ್ರಶಸ್ತಿಯನ್ನು ಕೂಡ ನೀಡಲಾಗುತ್ತದೆ ಎಂದು ತಿಳಿಸಿದೆ. ಒಟ್ಟು 7,75,000 ರೂ. ಗಳ ನಗದು ಪುರಸ್ಕಾರ ನೀಡಲು ಸರ್ಕಾರ ಆದೇಶಿಸಿದೆ.

# ಕೇರಳದ ನ್ಯಾ. ಹೇಮಾ ಸಮಿತಿಯಂತೆ ಸ್ಯಾಂಡಲ್‌ವುಡ್‌ನಲ್ಲೂ ಕಮಿಟಿ !

ಬೆಂಗಳೂರು: ಸಿನಿರಂಗದಲ್ಲಿ 'ಕಾಸ್ಟಿಂಗ್ ಕೌಚ್' ಸಮಸ್ಯೆಯಿದೆ ಎಂಬ ಆರೋಪವನ್ನು ಈಗಾಗಲೇ ಸಾಕಷ್ಟು ನಟಿಮಣಿಯರು ಮಾಡಿದ್ದಾರೆ. ಇತ್ತೀಚೆಗಷ್ಟೇ ಮಲಯಾಳಂ ಚಿತ್ರರಂಗದ ಕರಾಳ ಮುಖವನ್ನು ನ್ಯಾಯಮೂರ್ತಿ ಹೇಮಾ ಸಮಿತಿಯ ವರದಿ ಬಯಲಿಗೆಳೆದಿದೆ. ಫೈರ್ ಕಮಿಟಿ ಹಾಗೂ ನಿವೃತ್ತ ನ್ಯಾಯಾಮೂರ್ತಿಗಳ ನೇತೃತ್ವದಲ್ಲಿ ಸಮಿತಿಯೊಂದನ್ನು ರಚಿಸುವಂತೆ ಫಿಲ್ಮ್ ಇಂಡಸ್ಟ್ರಿ ಫಾರ್ ರೈಟ್ಸ್ ಅಂಡ್ ಇಕ್ವಾಲಿಟಿ (ಫೈರ್) ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಪತ್ರದ ಮೂಲಕ ಒತ್ತಾಯಿಸಿದೆ.




# ಮಹದಾಯಿ, ಕಳಸಾ–ಬಂಡೂರಿ ಪ್ರಸ್ತಾವನೆ ತಿರಸ್ಕರಿಸಿದ ಕೇಂದ್ರ



ಬೆಂಗಳೂರು : ಮಹದಾಯಿ, ಕಳಸಾ – ಬಂಡೂರಿ ಯೋಜನೆ ಕಾಮಗಾರಿ ಪ್ರಾರಂಭಿಸಲು ಕೇಂದ್ರ ಸರ್ಕಾರದ ವನ್ಯಜೀವಿ ಮಂಡಳಿಯ ವರು ಪ್ರಸ್ತಾವನೆ ತಿರಸ್ಕರಿಸಿರುವ ಹಿನ್ನೆಲೆಯಲ್ಲಿ ಸರ್ವಪಕ್ಷ ಸಭೆ ಕರೆಯಬೇಕೆಂದು ಶಾಸಕ ಎನ್. ಹೆಚ್. ಕೋನರೆಡ್ಡಿ, ಮುಖ್ಯಮಂತ್ರಿ ಸಿದ್ದರಾಮಯ್ಯಗೆ ಮನವಿ ಮಾಡಿದ್ದಾರೆ. ಉತ್ತರ ಕರ್ನಾಟಕದ ಕುಡಿಯುವ ನೀರಿನ ಸಮಸ್ಯೆಗೆ ಪರಿಹಾರವೆಂದರೆ ಮಹದಾಯಿ ಯೋಜನೆ ಆದರೆ ಕೇಂದ್ರ ಸರ್ಕಾರದ ನೇತೃತ್ವದ ರಾಷ್ಟ್ರೀಯ ವನ್ಯಜೀವಿ ಮಂಡಳಿಯು ರಾಜ್ಯ ಸರ್ಕಾರದ ಪ್ರಸ್ತಾವನೆಗೆ ಅನುಮೋದನೆ ನೀಡದೇ, ತಿರಸ್ಕರಿಸಿದೆ ಎಂದು ಅವರು ಹೇಳಿದ್ದಾರೆ.

# ದಕ್ಷಿಣ ಭಾರತದಲ್ಲಿ ಜರ್ಮನಿಯ 'ಫ್ಲಿಕ್ಸ್‌ಬಸ್' ಸಂಚಾರ



ಬೆಂಗಳೂರು: ಕೈಗೆಟುಕುವ ದರ, ಆರಾಮದಾಯಕ ಮತ್ತು ಅನುಕೂಲಕರ ಪ್ರಯಾಣದ, ಪ್ರಮುಖ ನಗರಗಳ ನಡುವೆ ಬಸ್ ಸಂಚಾರ ಒದಗಿಸುವ ಜರ್ಮನಿ ಮೂಲದ 'ಫ್ಲಿಕ್ಸ್‌ಬಸ್'ಗೆ ಭಾರಿ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ಹಸಿರು ನಿಶಾನೆ ತೋರಿದ್ದಾರೆ. ಭಾರತವೂ ಸೇರಿದಂತೆ 43 ದೇಶಗಳಲ್ಲಿ ಕಾರ್ಯಾಚರಿಸುತ್ತಿರುವ ಫ್ಲಿಕ್ಸ್ ಬಸ್ ಸೇವೆ ದಕ್ಷಿಣ ಭಾರತದಲ್ಲಿ ಜನರ ಪ್ರಯಾಣದ ಅನುಭವವನ್ನು ಹೊಸ ಎತ್ತರಕ್ಕೆ ಕೊಂಡೊಯ್ಯಲಿದೆ ಎಂದು ಸಚಿವ ಪಾಟೀಲ್ ವಿಶ್ವಾಸ ವ್ಯಕ್ತಪಡಿಸಿದರು.

# ರಾಜ್ಯ ಸರ್ಕಾರದ ಜತೆ ಒಡಂಬಡಿಕೆಗೆ ಮೈಕ್ರೋಸಾಫ್ಟ್ ಒಲವು




ಬೆಂಗಳೂರು: ಜನರೇಟೀವ್ ಎಐ ಮತ್ತು ಮುಂಚೂಣಿಗೆ ಬರುತ್ತಿರುವ ಆಧುನಿಕ ತಂತ್ರಜ್ಞಾನಗಳಿಗೆ ಸಂಬಂಧಿಸಿದ ಕೌಶಲ್ಯಗಳನ್ನು ಕಲಿಸಲು ರಾಜ್ಯ ಸರ್ಕಾರದೊಂದಿಗೆ ಒಡಂಬಡಿಕೆ ಮಾಡಿಕೊಳ್ಳಲು ಮೈಕ್ರೋಸಾಫ್ಟ್ ಕಂಪನಿಯು ಉತ್ಸುಕವಾಗಿದೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ಹೇಳಿದ್ದಾರೆ. ತಮ್ಮನ್ನು ಭೇಟಿಯಾದ ಮೈಕ್ರೋಸಾಫ್ಟ್ ಕಂಪನಿ ಭಾರತ ಮತ್ತು ದಕ್ಷಿಣ ಏಷ್ಯಾದ ಅಧ್ಯಕ್ಷ ಪುನೀತ್ ಚಾಂದೋಕ್ ನೇತೃತ್ವದ ಉನ್ನತ ಮಟ್ಟದ ನಿಯೋಗದ ಜತೆ ಸಚಿವರು ವಿಚಾರ ವಿನಿಮಯ ನಡೆಸಿದರು.

# ಪ್ರಾಧಿಕಾರದ ಸಭೆ ಕೋರ್ಟ್ ಆದೇಶ ಉಲ್ಲಂಘನೆ – ಯದುವೀರ್

ಮೈಸೂರು : ಚಾಮುಂಡೇಶ್ವರಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ಸಭೆಗೆ ಕೋರ್ಟ್ ತಡೆಯಾಜ್ಞೆ ಇದ್ದು, ಸೆಪ್ಟೆಂಬರ್ 5ರ ವರೆಗೆ ಯಥಾಸ್ಥಿತಿ ಕಾಪಾಡಿಕೊಂಡು ಹೋಗಬೇಕೆಂಬ ಆದೇಶವಿದೆ. ಇದರ ನಡುವೆ ಮುಖ್ಯಮಂತ್ರಿಗಳ ನೇತೃತ್ವದಲ್ಲಿ ಸಭೆ ನಡೆಯುತ್ತಿರುವುದು ತಡೆಯಾಜ್ಞೆಯ ಉಲ್ಲಂಘನೆಯಾಗಿದೆ. ಇದರ ವಿರುದ್ಧ ತಾಯಿ ಕಾನೂನು ಹೋರಾಟ ನಡೆಸುತ್ತಾರೆ ಎಂದು ಸಂಸದ ಯದುವೀರ್ ಒಡೆಯರ್ ತಿಳಿಸಿದರು. ಸಭೆಗೆ ನಮಗೆ ಮತ್ತು ನಮ್ಮ ತಾಯಿಯವರಿಗೆ ಆಹ್ವಾನ ಇದ್ದರೂ ಸಭೆಯಲ್ಲಿ ಭಾಗವಹಿಸುತ್ತಿಲ್ಲ ಎಂದರು.



# ಯಾವುದೇ ಬ್ಯಾಂಕಿನ ಯಾವುದೇ ಶಾಖೆಯಿಂದ ಪಿಂಚಣಿ




ನವದೆಹಲಿ: ಪ್ರಮುಖ ಬೆಳವಣಿಗೆಯೊಂದರಲ್ಲಿ, ನೌಕರರ ಪಿಂಚಣಿ ಯೋಜನೆಗಾಗಿ ಕೇಂದ್ರೀಕೃತ ಪಿಂಚಣಿ ಪಾವತಿ ವ್ಯವಸ್ಥೆ (ಸಿಪಿಪಿಎಸ್) ಪ್ರಸ್ತಾಪಕ್ಕೆ ಕೇಂದ್ರ ಸರ್ಕಾರ ಅನುಮೋದನೆ ನೀಡಿದೆ. ಈ ವ್ಯವಸ್ಥೆಯ ಮೂಲಕ ಪಿಂಚಣಿದಾರರು 2025ರ ಜ.1ರಿಂದ ಭಾರತದ ಯಾವುದೇ ಬ್ಯಾಂಕಿನಿಂದ ಪಿಂಚಣಿ ಪಡೆಯಲು ಸಾಧ್ಯವಾಗಲಿದೆ. ರಾಷ್ಟ್ರೀಯ ಮಟ್ಟದ ಕೇಂದ್ರೀಕೃತ ವ್ಯವಸ್ಥೆಯನ್ನು ಜಾರಿಗೊಳಿಸುತ್ತಿರುವುದು ಸಿಪಿಪಿಎಸ್‌ನಲ್ಲಿ ಮಹತ್ವದ ಬದಲಾವಣೆಯಾಗಿದೆ. ತಡೆರಹಿತ ಹಾಗೂ ಪರಿಣಾಮಕಾರಿ ಪಿಂಚಣಿ ವಿತರಣೆಗೆ ಅನುವುಮಾಡಿಕೊಡಲಿದೆ.

# ವಿಲೇಜ್ ಡಿಫೆನ್ಸ್ ಗಾರ್ಡ್ಸ್ ಕೈಗೆ ಅತ್ಯಾಧುನಿಕ ಆಯುಧ !



ಜಮ್ಮು ಮತ್ತು ಕಾಶ್ಮೀರ: ಜಮ್ಮು ಪ್ರದೇಶದ ಗ್ರಾಮ ರಕ್ಷಣಾ ಸಿಬ್ಬಂದಿಗೆ ಹಳೆಯ ಶಸ್ತ್ರಾಸ್ತ್ರಗಳ ಬದಲಿಗೆ ಹೊಸ ಎಸ್‌ಎಲ್‌ಆರ್ (ಸೆಮಿ–ಆಟೋಮ್ಯಾಟಿಕ್ ರೈಫಲ್)ಗಳನ್ನು ನೀಡಲಾಗಿದೆ. ಈ ಮೂಲಕ ಉಗ್ರರ ಹೆಡೆಮುರಿಕಟ್ಟಲು ಗ್ರಾಮ ರಕ್ಷಣಾ ಸಿಬ್ಬಂದಿ ಮತ್ತಷ್ಟು ಬಲ ತುಂಬಿದಂತಾಗಿದೆ. ವಿಶೇಷವಾಗಿ ದೋಡಾ, ಕಿಶ್ವಾರ್, ರಜೌರಿ, ಪೂಂಚ್ ಮತ್ತು ಜಮ್ಮುವಿನ ದೂರದ ಪ್ರದೇಶಗಳಲ್ಲಿ ಉಗ್ರಗಾಮಿಗಳನ್ನು ಎದುರಿಸಲು ಆಧುನಿಕ ಶಸ್ತ್ರಾಸ್ತ್ರಗಳನ್ನು ನೀಡಬೇಕು ಎಂದು ಗ್ರಾಮ ರಕ್ಷಣಾ ಸಿಬ್ಬಂದಿ ಒತ್ತಾಯಿಸಿದ್ದರು.

# ತಮಿಳರ ಕ್ಷಮೆಯಾಚಿಸಿದ ಸಚಿವೆ ಶೋಭಾ ಕರಂದ್ಲಾಜೆ



ತಮಿಳುನಾಡು: ರಾಮೇಶ್ವರಂ ಕೆಫೆ ಸ್ಫೋಟ ಪ್ರಕರಣಕ್ಕೂ ತಮಿಳರಿಗೂ ಸಂಬಂಧವಿದೆ ಎಂಬ ಹೇಳಿಕೆ ನೀಡಿದ್ದ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಅವರು ತಮಿಳರ ಕ್ಷಮೆಯಾಚಿಸಿದ್ದಾರೆ. ಈ ಪ್ರಕರಣ ರದ್ದುಗೊಳಿಸುವಂತೆ ಶೋಭಾ ಪರವಾಗಿ ಮದ್ರಾಸ್ ಹೈಕೋರ್ಟ್‌ನಲ್ಲಿ ಅರ್ಜಿ ಸಲ್ಲಿಸಲಾಗಿತ್ತು. ಬಾಂಬ್ ಸ್ಫೋಟದಲ್ಲಿ ಭಾಗಿಯಾಗಿದ್ದಾರೆ ಎಂಬ ಹೇಳಿಕೆಯನ್ನು ತಮಿಳರ ಭಾವನೆಗಳಿಗೆ ಧಕ್ಕೆ ತರುವ ಉದ್ದೇಶದಿಂದ ಮಾಡಲಾಗಿಲ್ಲ ಎಂದು ಹೇಳಿದ್ದಾರೆ.

# ಭೂ ಸಮೀಕ್ಷೆಯಿಂದ ವ್ಯಾಜ್ಯಗಳ ಸಂಖ್ಯೆ ಹೆಚ್ಚಳ

ಪಾಟ್ನಾ: ಬಿಹಾರದಲ್ಲಿ ನಡೆಯುತ್ತಿರುವ ಭೂ ಸಮೀಕ್ಷೆಯಿಂದ ರಾಜ್ಯದಲ್ಲಿ ವ್ಯಾಜ್ಯಗಳ ಸಂಖ್ಯೆ ಮತ್ತಷ್ಟು ಹೆಚ್ಚಾಗಲಿದೆ ಎಂದು ಜನ ಸುರಾಜ್ ಮುಖ್ಯಸ್ಥ ಪ್ರಶಾಂತ್ ಕಿಶೋರ್ ಹೇಳಿದ್ದಾರೆ. "ಸಮೀಕ್ಷೆಯು ನಡೆಯುತ್ತಿರುವ ವಿಧಾನದಿಂದಾಗಿ ಮುಂದಿನ ಆರು ತಿಂಗಳಲ್ಲಿ ವ್ಯಾಪಕ ಭೂ ಮಾಲೀಕತ್ವದ ವಿವಾದಗಳು ಭುಗಿಲೇಳಬಹುದು. ಸರಿಯಾದ ಸಿದ್ಧತೆ ಅಥವಾ ಸಂಪನ್ಮೂಲಗಳ ಬಳಕೆ ಮಾಡದೇ ತರಾತುರಿಯಲ್ಲಿ ಸಮೀಕ್ಷೆ ಪ್ರಾರಂಭಿಸಲಾಗಿದೆ" ಎಂದು ಕಿಶೋರ್ ಕೈಮೂರ್‌ನಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿ ತಿಳಿಸಿದರು.



# ಪ.ಬಂಗಾಳದಲ್ಲಿ ಅತ್ಯಾಚಾರಿಗಳಿಗೆ ಗಲ್ಲುಶಿಕ್ಷೆ ಮಸೂದೆ ಅಂಗೀಕಾರ



ಪಶ್ಚಿಮ ಬಂಗಾಳ: ಬಂಗಾಳದ ವೈದ್ಯೆ ವಿದ್ಯಾರ್ಥಿನಿ ಮೇಲಿನ ಅತ್ಯಾಚಾರ, ಹತ್ಯೆ ಕೇಸ್ ದೇಶಾದ್ಯಂತ ಸಂಚಲನ ಉಂಟು ಮಾಡಿದ ಬಳಿಕ ಎಚ್ಚೆತ್ತುಕೊಂಡಿರುವ ಸಿಎಂ ಮಮತಾ ಬ್ಯಾನರ್ಜಿ ಸರ್ಕಾರ, ಅತ್ಯಾಚಾರಿಗಳ ಹೆಡೆಮುರಿ ಕಟ್ಟಲು ಕಠಿಣ ಕಾನೂನುಗಳುಳ್ಳ ಮಸೂದೆಯನ್ನು ವಿಧಾನಸಭೆ ವಿಶೇಷ ಅಧಿವೇಶನದಲ್ಲಿ ಮಂಡಿಸಿ ಅಂಗೀಕಾರ ಪಡೆದುಕೊಂಡಿದೆ. ಅಪರಾಜಿತ ಮಹಿಳೆ ಮತ್ತು ಮಕ್ಕಳ ಮಸೂದೆ–2024ಕ್ಕೆ ಸರ್ವಾನುಮತದಿಂದ ಒಪ್ಪಿಗೆ ಸಿಕ್ಕಿದೆ. ರಾಜ್ಯಪಾಲರ ಸಹಿ ಬಳಿಕ ಇದು ಕಾನೂನಾಗಿ ಜಾರಿಯಾಗಲಿದೆ.




# ಕುಪ್ಪಂಡ ಪ್ರೊಡಕ್ಷನ್ ನಿರ್ಮಾಣದಲ್ಲಿ ಕೋಣ..



ಪೋಸ್ಟರ್ ಮೂಲಕ ಗಮನಸೆಳೆದಿದ್ದ ಕೋಣ ಸಿನಿಮಾದ ಟೀಸರ್ ಬಿಡುಗಡೆಯಾಗಿದೆ. ಬೆಂಗಳೂರಿನ ವಿಕ್ಟರಿ ಸಿನಿಮಾಸ್ ಥಿಯೇಟರ್‌ನಲ್ಲಿ ಟೀಸರ್ ಲಾಂಚ್ ಕಾರ್ಯಕ್ರಮ ನಡೆಯಿತು. ಈ ವೇಳೆ ಇಡೀ ಚಿತ್ರತಂಡ ಭಾಗಿಯಾಗಿತ್ತು. ಟೀಸರ್ ಬಿಡುಗಡೆ ಬಳಿಕ ಮಾತನಾಡಿದ ನಟ ಕೋಮಲ್ ಕುಮಾರ್, ಕೋಣ ಡಾರ್ಕ್ ಹ್ಯೂಮರ್ ಅಂತಾರೆ. ಆದರೆ ಇದರಲ್ಲಿ ಆ ರೀತಿಯ ಸಬ್ಟೆನ್ಸ್ ತುಂಬಾ ಇದೆ. ಚಾರ್ಲಿ ಚಾಂಪಿಯನ್ ಕಷ್ಟದಲ್ಲಿ ಸಿಗುವ ಪಾತ್ರ ಹೇಗೆ ಜನಕ್ಕೆ ಎಂಜಾಯ್ ಮೆಂಟ್ ಸಿಗುತ್ತದೆಯೋ ಹಾಗೇ. ಹರಿ ಹೇಳಿದ್ದು, ಮೂಢ ನಂಬಿಕೆ, ನನ್ನ ಹೊಸದಾಗಿ ತೋರಿಸಿದ ರೀತಿ, ಶಾಸ್ತ್ರ ಹೇಳುವ ರೀತಿ. ರೋಬೋ ಬಗ್ಗೆ ಹೇಳಿದ ರೀತಿ ಸಂತೋಷವಾಯ್ತು. ಕೋಣ ಸಿನಿಮಾ ನೋಡಿದಾಗ ಮಲಯಾಳಂ ಸಿನಿಮಾ ನೋಡಿದ ರೀತಿ ಆಯ್ತು. ನಿಮ್ಮ ಬೆಂಬಲ ಕೋಣ ಸಿನಿಮಾ ಮೇಲೆ ಇರಲಿ ಎಂದರು.

# ಮಗನ ಸಿನಿ "ರೈಡ್"ಗೆ ಅಪ್ಪನ ಸಾಥ್..



ಕನ್ನಡದಲ್ಲಿ ಉತ್ತಮ ಕಂಟೆಂಟ್‌ವುಳ್ಳ ಚಿತ್ರಗಳು ಯಶಸ್ವಿಯಾಗಿರುವುದೆ ಹೆಚ್ಚು. ಅಂತಹ ವಿಭಿನ್ನ ಕಂಟೆಂಟ್‌ನೊಂದಿಗೆ ಹೊಸತಂಡವೊಂದು ಮಾಡಿರುವ ಹೊಸ ಚಿತ್ರ "ರೈಡ್". ಚಿತ್ರದ ಹಾಡುಗಳು ಹಾಗೂ ಟ್ರೇಲರ್ ಬಿಡುಗಡೆಯಾಯಿತು. ನಿರ್ಮಾಪಕ ಉಮಾಪತಿ ಶ್ರೀನಿವಾಸಗೌಡ, 'ಕೆರೆಭೇಟೆ' ಖ್ಯಾತಿಯ ಗೌರಿ ಶಂಕರ್, ತಿಮ್ಮೇಗೌಡ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದರು. ನಿರ್ಮಾಪಕ ಉಮಾಪತಿ ಚಿತ್ರ ಯಶಸ್ವಿಯಾಗಲಿ ಎಂದು ಹಾರೈಸಿದರು. ರಾಮಕೃಷ್ಣ ರಾಮೋಹಳ್ಳಿ ಶ್ರೀವರಸಿದ್ಧಿ ವಿನಾಯಕ ಪ್ರೊಡಕ್ಷನ್ ಬ್ಯಾನರ್‌ನಲ್ಲಿ ನಿರ್ಮಿಸಿರುವ ಮೊದಲ ಚಿತ್ರವಿದು. ಈ ಚಿತ್ರದ ಮೂಲಕ ತಮ್ಮ ಪುತ್ರ ವೆಂಕಿ ಅವರನ್ನು ನಾಯಕನಟನಾಗಿ ಚಿತ್ರರಂಗ ಪ್ರವೇಶ ಮಾಡಿಸುತ್ತಿದ್ದಾರೆ. ನೂತನ ಪ್ರತಿಭೆ ತನ್ವಿ "ರೈಡ್" ಚಿತ್ರದ ನಾಯಕಿ. ಯೂಟ್ಯೂಬರ್ ನೀರಜ್ ಕುಮಾರ್ ಈ ಚಿತ್ರದಲ್ಲಿ ನಟಿಸಿದ್ದಾರೆ.

# ಮಾರಿಗುಡಿಯಲ್ಲಿ ಕಂಕನಾಡಿ!



ಎಚ್ ಪಿ ಆರ್ ಪ್ರೊಡಕ್ಷನ್ ಲಾಂಛನದಲ್ಲಿ ತ್ರಿಶೂಲ್ ಶೆಟ್ಟಿ ನಿರ್ದೇಶನ, ಹರಿಪ್ರಸಾದ್ ರೈ ನಿರ್ಮಾಣದಲ್ಲಿ ತಯಾರಾಗುತ್ತಿರುವ "ಕಂಕನಾಡಿ" ತುಳು ಚಲನ ಚಿತ್ರದ ಮುಹೂರ್ತ ಸಮಾರಂಭವು ಸೆಪ್ಟಂಬರ್ 8 ಭಾನುವಾರ ಬೆಳಿಗ್ಗೆ 9.30ಕ್ಕೆ ಉರ್ವಾ ಮಾರಿಗುಡಿ ದೇವಸ್ಥಾನದಲ್ಲಿ ನಡೆಯಲಿದೆ. ತ್ರಿಶೂಲ್ ಶೆಟ್ಟಿ ಅವರು ಸಿನಿಮಾರಂಗದಲ್ಲಿ ಹಲವಾರು ವರ್ಷಗಳಿಂದ ಕೆಲಸ ಮಾಡಿದ್ದಾರೆ. ಪುಳಿಮುಂಚಿ ತುಳು ಸಿನಿಮಾವನ್ನು ನಿರ್ದೇಶಿಸಿದ್ದರು. ಒಂದೇ ಹಂತದಲ್ಲಿ ದಕ್ಷಿಣಕನ್ನಡ ಜಿಲ್ಲೆಯಲ್ಲಿ ಚಿತ್ರೀಕರಣ ನಡೆಸಲು ರೂಪುರೇಶೆ ಸಿದ್ಧಪಡಿಸಿದ್ದಾರೆ. ಛಾಯಾಗ್ರಾಹಣ ಮಯೂರ್ ಆರ್ ಶೆಟ್ಟಿ, ಸಂಗೀತ ಕಿಶೋರ್ ಕುಮಾರ್ ಶೆಟ್ಟಿ, ಸಂಭಾಷಣೆ ಡಿಬಿಸಿ ಶೇಖರ್, ಕಲಾ ನಿರ್ದೇಶನ ಹರೀಶ್ ನಾಯಕ್, ಸಂಕಲನ ಗಣೇಶ್ ನಿರ್ಚಲ್, ಡಿಸೈನರ್ ದೇವಿ ರೈ, ಸಾಹಸ ಚಂದ್ರು ಬಂಡೆ, ನೃತ್ಯ ದಿಕ್ಷೀತ್ ಕುಮಾರ್ ಮತ್ತು ನವೀನ್ ಅವರದ್ದಾಗಿದೆ.

# ಮಿಡ್ಲ್ ಕ್ಲಾಸ್ ಹಾಡು ಬಿಡುಗಡೆ?

ವೈಭವ್ ಫ್ಲಿಕ್ಸ್ ಮತ್ತು ಮ್ಯಾಂಗೋ ಪಿಕಲ್ ಎಂಟರ್ಟೈನ್ಮೆಂಟ್ ಅರ್ಪಿಸುವ, ಎಚ್.ಪಿ.ಆರ್ ಫಿಲ್ಮ್ಸ್–ಹರಿಪ್ರಸಾದ್ ರೈಯವರ ಸಹಯೋಗದಲ್ಲಿ ಆನಂದ ಕುಂಪಲರವರ ನಿರ್ಮಾಣ ಹಾಗೂ ರಾಹುಲ್ ಅಮೀನ್ ನಿರ್ದೇಶನದಲ್ಲಿ ತಯಾರಾದ 'ಮಿಡ್ಲ್ ಕ್ಲಾಸ್ ಫ್ಯಾಮಿಲಿ' ತುಳು ಸಿನಿಮಾದ ವೀಡಿಯೋ ಸಾಂಗ್ ಸೆಪ್ಟಂಬರ್ 10ರಂದು ಮಂಗಳವಾರ ಸಂಜೆ 4 ಗಂಟೆಗೆ ಉಡುಪಿಯ ಕಲ್ಪನಾ ಚಿತ್ರಮಂದಿರದಲ್ಲಿ ಸಾರ್ವಜನಿಕರ ಹಾಗೂ ಗಣ್ಯರ ಸಮ್ಮುಖದಲ್ಲಿ ಬಿಡುಗಡೆ ಆಗಲಿದೆ. 'ರಾಜ್ ಸೌಂಡ್ಸ್ ಅಂಡ್ ಲೈಟ್ಸ್' ತಂಡದ ಬಹುತೇಕ ತಂತ್ರಜ್ಞರು, ಕಲಾವಿದರು ಇಲ್ಲಿದ್ದಾರೆ. ರಾಹುಲ್ ಅಮೀನ್ ನಿರ್ದೇಶಕರಾಗಿದ್ದಾರೆ. ವಿನೀತ್ ಕುಮಾರ್, ಸಮತಾ ಅಮೀನ್, ನವೀನ್ ಡಿ ಪಡೀಲ್, ಭೋಜರಾಜ್ ವಾಮಂಜೂರು, ಅರವಿಂದ ಬೋಳಾರ್, ಚೈತ್ರಾ ಶೆಟ್ಟಿ, ಪ್ರಸನ್ನ ಶೆಟ್ಟಿ ಬೈಲೂರು, ಉಮೇಶ್ ಮಿಜಾರ್, ಸಂದೀಪ್ ಶೆಟ್ಟಿ ಮಾಣಿಬೆಟ್ಟು, ರೂಪ ವರ್ಕಾಡಿ ಮುಂತಾದವರು ಅಭಿನಯಿಸಿದ್ದಾರೆ.



# ಜಂಬೂ ಸರ್ಕಸ್ ಟ್ರೈಲರ್ ಔಟ್

ಕಳೆದ ಮೂರು ದಶಕಗಳಿಂದ ಕನ್ನಡ ಚಿತ್ರೋದ್ಯಮದಲ್ಲಿ ತೊಡಗಿಕೊಂಡಿರುವ ಹೆಚ್.ಸಿ. ಸುರೇಶ್ ಅವರು ಮಹತಿ ಕಂಬೈನ್ಸ್ ಮೂಲಕ "ಜಂಬೂ ಸರ್ಕಸ್" ಎಂಬ ಚಲನ ಚಿತ್ರವನ್ನು ನಿರ್ಮಾಣ ಮಾಡಿದ್ದಾರೆ. ಪ್ರಮೋದ್ ಶೆಟ್ಟಿ ಅವರ ಪತ್ನಿ ಸುಪ್ರೀತಾ ಶೆಟ್ಟಿ ಅವರು ಸಹ ನಿರ್ಮಾಪಕಿಯಾಗಿ ಕೈಜೋಡಿಸಿದ್ದಾರೆ. ಹಿಟ್ ಚಿತ್ರಗಳ ನಿರ್ದೇಶಕ ಎಂ.ಡಿ. ಶ್ರೀಧರ್ ಅವರು ಈ ಚಿತ್ರಕ್ಕೆ ಕಥೆ, ಚಿತ್ರಕಥೆ ಬರೆದು ನಿರ್ದೇಸನ ಮಾಡಿದ್ದಾರೆ. ಪ್ರವೀಣ್ ತೇಜ್, ಅಂಜಲಿ ಎಸ್.ಅನೀಶ್ ಪ್ರಮುಖ ಪಾತ್ರಗಳಲ್ಲಿ ಕಾಣಿಸಿಕೊಂಡಿರುವ ಸ್ನೇಹ, ಪ್ರೀತಿಯ ಸುತ್ತ ನಡೆಯುವ ಕಥಾಹಂದರ ಒಳಗೊಂಡ ಈ ಚಿತ್ರದ ಟ್ರೈಲರ್ ಬಿಡುಗಡೆ ಕಾರ್ಯಕ್ರಮ ಇತ್ತೀಚೆಗೆ ನಡೆಯಿತು. ಸುಪ್ರೀತಾ ಶೆಟ್ಟಿ, ಅಂಜಲಿ ಅನೀಶ್, ಹಾಗೂ ನಟಿ ನಯನಾ ಈ ಚಿತ್ರದ ಟ್ರೈಲರ್ ಬಿಡುಗಡೆ ಮಾಡಿದರು. ಚಿತ್ರದಲ್ಲಿ ನಾಲ್ಕು ಹಾಡುಗಳಿವೆ. ಅದರಲ್ಲಿ ಎರಡು ಹಾಡುಗಳನ್ನು ಕವಿರಾಜ್ ಬರೆದಿದ್ದಾರೆ.











Edited,Published, Printed by Lalita Kumari (Lalithasri Preetham Rai) Shop N0: 6, Lingamma Towers. Opp. Pandeshwar police station, Pandeshwar Mangaluru 575001. Dakshina Kannada.
All Rights Reserved RNI Ref: 1327299/KARKAN26532. Printed @ Digantha Mudrana Limited, Yeyyadi, Mangaluru 575008 email: karavalitharangini@gmail.com PH: +91 9880109212